ಸಂಪುಟ : 11 ಸಂಚಿಕೆ: 104 ಪುಟ : 4+2 ಬೆಲೆ: 3.00 ಮಂಗಳವಾರ ಮೇ 26 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 104 Pages : 4+2 Price : 3.00 Tuesday May 26 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಚಿವ ಎಚ್.ಕೆ. ಪಾಟೀಲ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಮೇ 26 ಮತ್ತು 27ರಂದು ಗದಗ ಜಿಲ್ಲೆಯಲ್ಲಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಮೇ26ರಂದು ಬೆಳಿಗ್ಗೆ 10.30ಕ್ಕೆ ಬೆಟಗೇರಿಯ ಕುರಹಟ್ಟಿ ಪೇಟೆ ವಾರ್ಡ್ ನಂ.10ರಲ್ಲಿ ₹1 ಕೋಟಿ ವೆಚ್ಚದ ಸಿಸಿ ರಸ್ತೆ ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆ ಮತ್ತು ನೂತನ ಅಂಗನವಾಡಿ ಕಟ್ಟಡ ಉದ್ಘಾಟನೆ ನೆರವೇರಿಸಲಿದ್ದಾರೆ.

ಬೆಳಿಗ್ಗೆ 11.30ಕ್ಕೆ ಬೆಟಗೇರಿಯ ವಾರ್ಡ್ ನಂ.06ರಲ್ಲಿ ಶ್ರೀ ಚನ್ನಪ್ಪಗೌಡರ ಮನೆ ಸಮೀಪ ₹1 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ, ಅಂಗನವಾಡಿ ಕಟ್ಟಡ ಉದ್ಘಾಟನೆ ಹಾಗೂ ಹಕ್ಕುಪತ್ರ ವಿತರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಮಧ್ಯಾಹ್ನ 12.30ಕ್ಕೆ ನಗರದ ಕಳಸಾಪುರ ರಸ್ತೆಯ ಇಂಡಿಯನ್ ಬ್ಯಾಂಕ್ ಸಮೀಪ ವಾರ್ಡ್ ನಂ.34 ಮತ್ತು 35ರಲ್ಲಿ ₹1 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆ ನೆರವೇರಿಸಲಿದ್ದಾರೆ.

ಸಂಜೆ 5ಕ್ಕೆ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯ, ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಗದಗ ವಿಧಾನಸಭಾ ಕ್ಷೇತ್ರದ ಬಿ.ಎಲ್.ಎ.ಗಳ ಸಭೆ ನಡೆಸಿ ಗದಗದಲ್ಲಿ ವಾಸ್ತವ್ಯ ಮಾಡಲಿದ್ದಾರೆ.

ಮೇ 27ರಂದು ಬೆಳಿಗ್ಗೆ 10ಕ್ಕೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಡಾ. ಪಂಡಿತ್ ಪುಟ್ಟರಾಜ ಕವಿ ಗವಾಯಿಗಳ ಸ್ಮಾರಕ ಕಾಮಗಾರಿ ವೀಕ್ಷಿಸಿ ಜಿಲ್ಲಾಧಿಕಾರಿಗಳು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಿದ್ದಾರೆ.

ಬೆಳಿಗ್ಗೆ 11ಕ್ಕೆ ವಾರ್ಡ್ ನಂ.30ರಲ್ಲಿ ಶ್ರೀ ಗಣಪತಿ ದೇವಸ್ಥಾನ ಸಮೀಪ ₹1 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಿದ್ದಾರೆ.

ಮಧ್ಯಾಹ್ನ 12ಕ್ಕೆ ರಾಜೀವಗಾಂಧಿನಗರ ಹುಡ್ಕೋ ಕಾಲೋನಿಯಲ್ಲಿ ₹1 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ. ಮಧ್ಯಾಹ್ನ 1ಕ್ಕೆ ಅವಳಿ ನಗರದ ವಾರ್ಡ್ ನಂ.08ರಲ್ಲಿ ₹1 ಕೋಟಿ ವೆಚ್ಚದ ಸಿಸಿ ರಸ್ತೆ ಕಾಮಗಾರಿಯ ಭೂಮಿ ಪೂಜೆ ನೆರವೇರಿಸಲಿದ್ದಾರೆ.

ಸಂಜೆ 5ಕ್ಕೆ ವಾರ್ಡ್ ನಂ.12 ಮತ್ತು 13ರಲ್ಲಿ ಅಶೋಕ ಅಂಗಡಿಯವರ ಮನೆ ಸಮೀಪ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ.

ಸಂಜೆ 6ಕ್ಕೆ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.12 ಬಳಿ ರಸ್ತೆ ಅಭಿವೃದ್ಧಿ ಕಾಮಗಾರಿ ಭೂಮಿ ಪೂಜೆ, ಎಸ್.ಎಂ. ಕೃಷ್ಣಾನಗರದಲ್ಲಿ ಸಾರ್ವಜನಿಕ ಶೌಚಾಲಯ ಹಾಗೂ ಸರಕಾರಿ ಉರ್ದು ಶಾಲೆಯ ಕಾಂಪೌಂಡ್ ಉದ್ಘಾಟನೆ ಮತ್ತು ಹಕ್ಕುಪತ್ರ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಸಚಿವರ ಕಾರ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

### ಗಂಗಿಮಡಿಯಲ್ಲಿ ಸಂತ್ರಸ್ತರ ಕಣ್ಣೀರಿಗೆ ಸ್ಪಂದಿಸಿದ ಸಚಿವ ಎಚ್.ಕೆ. ಪಾಟೀಲ-ಸಂತ್ರಸ್ತರಿಗೆ ಶಾಶ್ವತ ಸೂರಿನ ಭರವಸೆ

# ಸಂತ್ರಸ್ತರ ಅಳಲು ಆಲಿಸಿದ ಸಚಿವ ಪಾಟೀಲ

■ವಿಜಯಸಾಕ್ಷಿ ಸುದ್ದಿ, ಗದಗ

ಅಧಿಕ ಮಳೆಯಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಗದಗ ನಗರದ ಗಂಗಿಮಡಿ ಪ್ರದೇಶಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೋಮವಾರ ಭೇಟಿ ನೀಡಿ, ಸಂತ್ರಸ್ತ ಕುಟುಂಬಗಳಿಗೆ ಸಾಂತ್ವನ ಹೇಳಿದರು. ಸ್ಥಳದಲ್ಲೇ ಅಧಿಕಾರಿಗಳಿಂದ ಮಾಹಿತಿ ಪಡೆದು ತುರ್ತು ನೆರವು ಹಾಗೂ ಶಾಶ್ವತ ಪುನರ್ವಸತಿ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಸಂತ್ರಸ್ತರೊಂದಿಗೆ ನೇರವಾಗಿ ಮಾತನಾಡಿದ ಸಚಿವರು, "ನಿಮ್ಮ ಪರಿಸ್ಥಿತಿಯನ್ನು ಖುದ್ದಾಗಿ ಅವಲೋಕನ ಮಾಡಿದ್ದೇನೆ. ಸಂಕಷ್ಟದಲ್ಲಿರುವ ಜನರ ನೆರವಿಗೆ ಸರ್ಕಾರ ಸದಾ ಬದ್ಧವಾಗಿದೆ. ಯಾರೂ ಆತಂಕಪಡುವ ಅಗತ್ಯವಿಲ್ಲ" ಎಂದು ಧೈರ್ಯ ತುಂಬಿದರು.

ಗಂಗಿಮಡಿ ಪ್ರದೇಶದಲ್ಲಿ ಒಟ್ಟು 96 ಕುಟುಂಬಗಳು ತಗಡಿನ ಶೇಡ್‌ಗಳಲ್ಲಿ ಜೀವನ ಸಾಗಿಸುತ್ತಿದ್ದು, ಭಾರೀ ಮಳೆಯಿಂದ 9 ಶೇಡ್‌ಗಳು ಸಂಪೂರ್ಣ ಕುಸಿದಿವೆ.



ಈಗಾಗಲೇ ಜಿಲ್ಲಾಡಳಿತದಿಂದ 88 ಕುಟುಂಬಗಳಿಗೆ ತಲಾ 5 ಸಾವಿರ ನೆರವು ವಿತರಿಸಲಾಗಿದ್ದು, ಉಳಿದವರಿಗೆ ಶೀಘ್ರವೇ ಸಹಾಯಧನ ನೀಡಲಾಗುವುದು ಎಂದು ಸಚಿವರು ತಿಳಿಸಿದರು.

ಕೆಲವರು ಮನೆಗಳಿದ್ದರೂ ಶೇಡ್‌ಗಳಲ್ಲಿ ವಾಸಿಸುತ್ತಿರುವ ಮಾಹಿತಿ ಗಮನಕ್ಕೆ ಬಂದಿದೆ. ಅರ್ಹರನ್ನು ಗುರುತಿಸಿ ಮೊದಲ ಹಂತದಲ್ಲಿ ನಿರ್ಮಾಣವಾಗುತ್ತಿರುವ 1000 ಮನೆಗಳಲ್ಲಿ ನಿಜವಾದ ಸಂತ್ರಸ್ತರಿಗೆ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು.

> "ನಮ್ಮ ಅಳಲಿಗೆ ಸ್ಪಂದಿಸಿ ಸಚಿವರು ಸ್ಥಳಕ್ಕೆ ಬಂದು ಪರಿಶೀಲಿಸಿರುವುದು ನಮಗೆ ಧೈರ್ಯ ತಂದಿದೆ."
> **– ಗಂಗಿಮಡಿ ನಿವಾಸಿಗಳು**

> "ಸಂತ್ರಸ್ತರಿಗೆ ಶಾಶ್ವತ ಸೂರು ಕಲ್ಪಿಸುವುದು ಸರ್ಕಾರದ ಜವಾಬ್ದಾರಿ. ಅರ್ಹರಿಗೆ ಮನೆ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು."
> **– ಎಚ್.ಕೆ. ಪಾಟೀಲ, ಜಿಲ್ಲಾ ಉಸ್ತುವಾರಿ ಸಚಿವ**

**"₹5 ಸಾವಿರ ಸಾಲದು" ಸಂತ್ರಸ್ತರ ಮನವಿ**

ಸಂಪೂರ್ಣ ಹಾನಿಗೊಳಗಾದ 9 ಕುಟುಂಬಗಳು, "₹5 ಸಾವಿರ ನೆರವು ಸಾಕಾಗುವುದಿಲ್ಲ. ಕನಿಷ್ಠ ₹20 ಸಾವಿರ ಸಹಾಯಧನ ನೀಡಬೇಕು" ಎಂದು ಸಚಿವರ ಮುಂದೆ ಮನವಿ ಮಾಡಿದರು. ಈ ಬಗ್ಗೆ ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

▸▸4ನೇ ಪುಟಕ್ಕೆ

### "ವಿಂಡ್‌ಫ್ಯಾನ್-ಸೋಲಾರ್ ಯೋಜನೆಗಳ ಲಾಭ ಸ್ಥಳೀಯರಿಗೆ ತಲುಪಲಿ" : ಎಚ್.ಕೆ. ಪಾಟೀಲ

# ಗದಗ ಜಿಡಿಪಿ ಏರಿಸೋ ಶಕ್ತಿ ಗಾಳಿ-ಬೆಳಕಿಗಿದೆ!

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನೈಸರ್ಗಿಕ ಸಂಪನ್ಮೂಲಗಳಿಂದ ಸಿಗುವ ಲಾಭ ಸ್ಥಳೀಯ ರೈತರಿಗೆ ದೊರೆಯುತ್ತಿದ್ದರೆ ಗದಗ ಜಿಲ್ಲೆಯ ಜಿಡಿಪಿ ದೇಶದಲ್ಲೇ ಮುಂಚೂಣಿಗೆ ಬರುತ್ತಿತ್ತು ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಜಿಲ್ಲಾ ಯೋಜನಾ ಸಮಿತಿ ಹಾಗೂ 2027-28ನೇ ಸಾಲಿನ ಸಮಗ್ರ ಅಭಿವೃದ್ಧಿ ಯೋಜನೆ ರೂಪಿಸುವ ಸಂಬಂಧ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿಗಳು ಮತ್ತು ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

"ವಿಂಡ್‌ಫ್ಯಾನ್ ಹಾಗೂ ಸೋಲಾರ್ ಘಟಕಗಳಿಂದ ಸಿಗುವ ಆದಾಯ ರೈತರಿಗೆ ತಲುಪಿದ್ದರೆ ಗದಗ ಜಿಲ್ಲೆಯ ಜಿಡಿಪಿ ದೇಶದಲ್ಲೇ 5 ಅಥವಾ 6ನೇ ಸ್ಥಾನದಲ್ಲಿರುತ್ತಿತ್ತು" ಎಂದು ಹೇಳಿದರು.

ರಾಜ್ಯದ ಅಭಿವೃದ್ಧಿ ಹೊಂದಿದ ಜಿಲ್ಲೆಗಳ ಪಟ್ಟಿಯಲ್ಲಿ ಗದಗ ಹೆಸರು ಕಾಣಿಸದಿರಬಹುದು. ಆದರೆ ವೇಗವಾಗಿ ಬೆಳೆಯುತ್ತಿರುವ ಜಿಲ್ಲೆಗಳಲ್ಲಿ ಗದಗ ಸದಾ ಮುಂಚೂಣಿಯಲ್ಲಿದೆ. ಸರ್ಕಾರದ ಯೋಜನೆಗಳನ್ನು ಜಾರಿಗೆ ತರಲು ಗದಗ ರಾಜ್ಯದ ಟಾಪ್-3 ಜಿಲ್ಲೆಗಳಲ್ಲಿ ಒಂದಾಗಿದೆ ಎಂದು ಸಚಿವರು ಹೇಳಿದರು.

"ತಳಮಟ್ಟದಿಂದ ಯೋಜನಾ ವ್ಯವಸ್ಥೆ ರೂಪಿಸುವ ಗ್ರಾಮ ಸ್ವರಾಜ್ ಕಾನೂನು ಜಾರಿಗೆ ತಂದಿರುವ ಹೆಮ್ಮೆ ಕರ್ನಾಟಕದ್ದು. ಮುಳಗುಂದದಲ್ಲಿ ಜಾರಿಯಾದ 'ರಿಜ್




ಟು ವ್ಯಾಲಿ' ಯೋಜನೆ ರಾಜ್ಯದಲ್ಲೇ ಮಾದರಿಯಾಗಿದೆ" ಎಂದರು.

ಕಬ್ಬು ಬೆಳೆಗಾರರಿಗೆ ಸರ್ಕಾರ ₹300 ಪ್ರೋತ್ಸಾಹಧನ ನೀಡುತ್ತಿದೆ. ಆದರೆ ಸಿರಿಧಾನ್ಯ ಬೆಳೆಗಾರರಿಗೆ ಯಾವುದೇ ಉತ್ತೇಜನ ಸಿಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದ ಸಚಿವರು, "ಜನರು ಸಿರಿಧಾನ್ಯ ಸೇವನೆ ರೂಢಿಸಿಕೊಂಡರೆ ಅನ್ನಭಾಗ್ಯ ಯೋಜನೆ ನಿಲ್ಲಿಸಬಹುದು" ಎಂದು ಹಾಸ್ಯ ಚಟಾಕಿ ಹಾರಿಸಿದರು.

**"ಅಭಿವೃದ್ಧಿ ಎಂದರೆ ಕೇವಲ ಕಟ್ಟಡವಲ್ಲ"**

ಜಲತಜ್ಞ ರಾಜೇಂದ್ರ ಸಿಂಗ್ ಮಾತನಾಡಿ, "1992ರ ವರೆಗೆ ಪರಿಸರ ಮತ್ತು ಸಂಸ್ಕೃತಿಯನ್ನು ಒಳಗೊಂಡ ಅಭಿವೃದ್ಧಿ ನಡೆಯುತ್ತಿತ್ತು. ಈಗ ಅಭಿವೃದ್ಧಿ ಎಂದರೆ ಕೇವಲ ಇನ್ಫ್ರಾಸ್ಟ್ರಕ್ಚರ್‌ಗೆ ಸೀಮಿತವಾಗಿದೆ" ಎಂದು ಬೇಸರ ವ್ಯಕ್ತಪಡಿಸಿದರು.

"ರಾಜಸ್ಥಾನದ ಹಲವು ಜಿಲ್ಲೆಗಳಿಗಿಂತ ಗದಗದಲ್ಲಿ ಉತ್ತಮ ಮಳೆಯಿದೆ. ಇಲ್ಲಿನ ಮಣ್ಣು ಮತ್ತು ನೀರನ್ನು ರಕ್ಷಿಸಿದರೆ ಜಿಲ್ಲೆಯ ಅಭಿವೃದ್ಧಿ ಖಚಿತ" ಎಂದು ಹೇಳಿದರು.

ಸಿರಿಧಾನ್ಯಗಳ ಮಹತ್ವ ಕುರಿತು ಮಾತನಾಡಿದ ಡಾ. ಖಾದರ್, "ಅಕ್ಕಿ ನೀಡುವ ಬಗ್ಗೆ ಮಾತನಾಡುತ್ತೇವೆ. ಆದರೆ ಅಕ್ಕಿ ಬೆಳೆಯುವ ಮಣ್ಣಿನ ರಕ್ಷಣೆಯ ಬಗ್ಗೆ ಚಿಂತನೆ ಇಲ್ಲ" ಎಂದು ಹೇಳಿದರು.

"ಹಸಿರು ಕ್ರಾಂತಿಯ ಬಳಿಕ ಪ್ರಪಂಚದ ಶೇ.42ರಷ್ಟು ಭೂಮಿ ಬರಡಾಗಿದೆ. ನಮ್ಮ ಆಹಾರವನ್ನು ನಾವೇ ಬೆಳೆದು ಸೇವಿಸಿದಾಗ ಮಾತ್ರ ಸ್ವಾಭಿಮಾನಿ ಬದುಕು ಸಾಧ್ಯ" ಎಂದರು.

> "ನೈಸರ್ಗಿಕ ಸಂಪನ್ಮೂಲಗಳ ಲಾಭ ಸ್ಥಳೀಯ ರೈತರಿಗೆ ಸಿಕ್ಕಾಗ ಮಾತ್ರ ನಿಜವಾದ ಅಭಿವೃದ್ಧಿ ಸಾಧ್ಯ."
> – ಎಚ್.ಕೆ. ಪಾಟೀಲ, ಜಿಲ್ಲಾ ಉಸ್ತುವಾರಿ ಸಚಿವ

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ್ ಮಾತನಾಡಿ, ಗ್ರಾಮ ಪಂಚಾಯಿತಿಗಳಿಂದಲೇ ಯೋಜನೆ ರೂಪಿಸುವುದು ಉತ್ತಮ ಬೆಳವಣಿಗೆ ಎಂದರು.

ಗದಗ ಜಿಲ್ಲೆಯ ಸಾಕ್ಷರತೆ ಪ್ರಮಾಣ ಶೇ.70.18 ಮಾತ್ರ ಇದೆ. ಗದಗ-ಬೆಟಗೇರಿ ಅವಳಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ. ಎಲ್ಲಾ ಕ್ಷೇತ್ರಗಳಲ್ಲೂ ಮೂಲಸೌಕರ್ಯ ಅಭಿವೃದ್ಧಿಯಾದಾಗ ಮಾತ್ರ ಜಿಲ್ಲೆಯ ಸಮಗ್ರ ಪ್ರಗತಿ ಸಾಧ್ಯ ಎಂದು ಹೇಳಿದರು.

ಸಭೆಯಲ್ಲಿ ರಾಜ್ಯ ವಿಕೇಂದ್ರೀಕರಣ ಯೋಜನಾ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಮಾಜಿ ಶಾಸಕ ರಾಮಣ್ಣ ಲಮಾಣಿ, ಗ್ಯಾರಂಟಿ ಸಮಿತಿ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ವಾಸಣ್ಣ ಕುರುಡಗಿ, ಸಿದ್ದು ಪಾಟೀಲ, ಎಸ್.ಪಿ. ಬಳಿಗಾರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ವಾರ್ತಾ ಇಲಾಖೆಯ ನೂತನ ಪತ್ರಿಕಾ ವಾಹನಕ್ಕೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೂತನ ಪತ್ರಿಕಾ ವಾಹನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸೋಮವಾರ ಜಿಲ್ಲಾಧಿಕಾರಿಗಳ ಕಾರ್ಯಾಲಯ ಆವರಣದಲ್ಲಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ತಾಲ್ಲೂಕು ಅಧ್ಯಕ್ಷ




ಅಶೋಕ ಮಂದಾಲಿ, ನೀಲವ್ವ ಬೋಳನವರ, ಮಾಜಿ ಶಾಸಕ ರಾಮಣ್ಣ ಲಮಾಣಿ, ಪಾರುಕ್ ಹುಬ್ಬಳ್ಳಿ ಸೇರಿದಂತೆ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ ಹಾಗೂ ಇತರ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಮೊಬೈಲ್ ಕ್ಯಾಂಟೀನ್ ವಾಹನಕ್ಕೆ ಸಚಿವ ಪಾಟೀಲ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರವಾಸೋದ್ಯಮ ಇಲಾಖೆಯ ಮೊಬೈಲ್ ಕ್ಯಾಂಟೀನ್ ವಾಹನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸೋಮವಾರ ಜಿಲ್ಲಾಧಿಕಾರಿಗಳ ಕಾರ್ಯಾಲಯ ಆವರಣದಲ್ಲಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.



ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಗೆ ಆಹಾರ ಹಾಗೂ ಅಗತ್ಯ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಈ ಮೊಬೈಲ್ ಕ್ಯಾಂಟೀನ್ ವಾಹನವನ್ನು ಆರಂಭಿಸಲಾಗಿದೆ.

### "ಪೆಟ್ರೋಲ್-ಡೀಸೆಲ್ ಬೆಲೆ ಹೆಚ್ಚಳ ಜನರ ಮೇಲಿನ ಆರ್ಥಿಕ ಹೊರೆ" ; ದರ ಇಳಿಕೆಗೆ ಆಗ್ರಹ

## ಇಂಧನ ದರ ಏರಿಕೆಗೆ ವೆಲ್ಫೇರ್ ಪಾರ್ಟಿ ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲದ ದರಗಳನ್ನು ನಿರಂತರವಾಗಿ ಏರಿಸುತ್ತಿರುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಕ್ರಮವನ್ನು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಕರ್ನಾಟಕ ತೀವ್ರವಾಗಿ ಖಂಡಿಸಿದೆ.

ಪತ್ರಿಕಾ ಪ್ರಕಟಣೆಯಲ್ಲಿ ಮಾತನಾಡಿರುವ ವೆಲ್ಫೇರ್ ಪಾರ್ಟಿ ಕರ್ನಾಟಕ ರಾಜ್ಯಾಧ್ಯಕ್ಷ ಅಡ್ವೊಕೇಟ್ ತಾಹೇರ್ ಹುಸೇನ್, ಇಂಧನ ದರ ಏರಿಕೆಯಿಂದ ಸಾಮಾನ್ಯ ಜನತೆ, ರೈತರು, ಕಾರ್ಮಿಕರು, ಸಾರಿಗೆ ಕ್ಷೇತ್ರ ಹಾಗೂ ಸಣ್ಣ ವ್ಯಾಪಾರಿಗಳ ಮೇಲೆ ಭಾರೀ ಆರ್ಥಿಕ ಹೊರೆ ಬೀಳುತ್ತಿದೆ ಎಂದು ಆರೋಪಿಸಿದರು.

ಕಳೆದ ಕೆಲ ದಿನಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರಗಳನ್ನು ಹಲವು ಬಾರಿ ಹೆಚ್ಚಿಸಲಾಗಿದ್ದು, ಅನೇಕ ನಗರಗಳಲ್ಲಿ ಪೆಟ್ರೋಲ್ ದರ ಲೀಟರ್‌ಗೆ ₹7 ಕ್ಕೂ ಹೆಚ್ಚು ಹಾಗೂ ಡೀಸೆಲ್ ದರ ₹7.50 ರವರೆಗೆ ಏರಿಕೆಯಾಗಿದೆ. ಇತ್ತೀಚಿನ ಹೆಚ್ಚಳದಲ್ಲೇ ಪೆಟ್ರೋಲ್ ₹2.61 ಹಾಗೂ ಡೀಸೆಲ್ ₹2.71 ಏರಿಕೆಯಾಗಿದೆ ಎಂದು ತಿಳಿಸಿದ್ದಾರೆ.

ವಾಣಿಜ್ಯ ಹಾಗೂ ಗೃಹ ಬಳಕೆಯ ಐಕಲು ಸಿಲಿಂಡರ್ ದರಗಳ ಏರಿಕೆಯಿಂದ ಮಧ್ಯಮ ಮತ್ತು ಬಡ ವರ್ಗದ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ಜಾಗತಿಕ ಕಚ್ಚಾ ತೈಲದ ಬೆಲೆ ಇಳಿಕೆಯಾಗಿದ್ದರೂ ಜನರಿಗೆ ಅದರ ಪ್ರಯೋಜನ ತಲುಪಿಸುವಲ್ಲಿ ಸರ್ಕಾರಗಳು ವಿಫಲವಾಗಿವೆ ಎಂದು ದೂರಿದರು.

ಇಂಧನ ದರ ಏರಿಕೆಯಿಂದ ಸಾರಿಗೆ ವೆಚ್ಚ, ಕೃಷಿ ವೆಚ್ಚ, ಆಹಾರ ಪದಾರ್ಥಗಳು ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಲಿದ್ದು, ರೈತರು, ದಿನಗೂಲಿ ಕಾರ್ಮಿಕರು ಹಾಗೂ ಮಧ್ಯಮ ವರ್ಗದ ಜನರು ತೀವ್ರ ಸಂಕಷ್ಟ ಅನುಭವಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

▸▸3ನೇ ಪುಟಕ್ಕೆ

> "ಪೆಟ್ರೋಲ್, ಡೀಸೆಲ್ ಮತ್ತು ಗ್ಯಾಸ್ ದರಗಳ ನಿರಂತರ ಏರಿಕೆ ಸಾಮಾನ್ಯ ಜನರ ಮೇಲಿನ ಆರ್ಥಿಕ ಶೋಷಣೆಯಾಗಿದೆ"
> **– ತಾಹೇರ್ ಹುಸೇನ್,**
> ರಾಜ್ಯಾಧ್ಯಕ್ಷ, ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ- ಕರ್ನಾಟಕ

## ಬೆಳಗಾವಿಯಲ್ಲೇ ಚಳಿಗಾಲ ಅಧಿವೇಶನ: ಸಚಿವ ಎಚ್.ಕೆ. ಪಾಟೀಲ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಳಗಾವಿಯಲ್ಲೇ ಚಳಿಗಾಲದ ಅಧಿವೇಶನ ನಡೆಯಲಿದ್ದು, ಅದನ್ನು ಬೇರೆಡೆಗೆ ಸ್ಥಳಾಂತರಿಸುವ ಕುರಿತು ಸರ್ಕಾರ ಯಾವುದೇ ನಿರ್ಧಾರ ಕೈಗೊಂಡಿಲ್ಲ ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಸ್ಪಷ್ಟಪಡಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಚಳಿಗಾಲದ ಅಧಿವೇಶನದ ಸ್ಥಳ ಬದಲಾವಣೆ ಕುರಿತು ಸಚಿವ ಸಂಪುಟದಲ್ಲಿ ಇನ್ನೂ ಯಾವುದೇ ಚರ್ಚೆ ಅಥವಾ ನಿರ್ಣಯವಾಗಿಲ್ಲ. ಮೇ 29ರಂದು ನಡೆಯುವ ಸಾಧ್ಯತೆಯಿರುವ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ಅಂತಿಮ ನಿರ್ಧಾರ ಕೈಗೊಳ್ಳಬಹುದು" ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಕುರಿತು ಮಾತನಾಡಿದ ಸಚಿವರು, "ಕೆಲವು ತಾಂತ್ರಿಕ ಸಮಸ್ಯೆಗಳ ಹಿನ್ನೆಲೆಯಲ್ಲಿ ಫಲಾನುಭವಿಗಳಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ" ಎಂದರು.




ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮತದಾನದ ಹಕ್ಕು ಕಳೆದುಕೊಂಡರೆ ಗ್ಯಾರಂಟಿ ಸೌಲಭ್ಯಗಳು ನಿಲ್ಲುತ್ತವೆ ಎಂಬ ಆತಂಕ ಜನರಲ್ಲಿ ಇದೆ. ಜಿಎಸ್‌ಟಿ ಸಂಬಂಧಿತ ಕಾರಣಗಳಿಂದ ಕೆಲವರ ಯೋಜನೆಗಳು ಸ್ಥಗಿತಗೊಂಡಿದ್ದರೂ, ಸ್ಪಷ್ಟೀಕರಣ ನೀಡಿದ ಪ್ರಕರಣಗಳನ್ನು ಮರುಪರಿಶೀಲಿಸಿ ಸೌಲಭ್ಯ ಮರುಜಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ಟೀಕಿಸಿದ ಸಚಿವರು, "ದೇಶದ ಆರ್ಥಿಕ ಸ್ಥಿತಿ ಸರಿಯಾದ ದಿಕ್ಕಿನಲ್ಲಿ ಸಾಗುತ್ತಿಲ್ಲ. ಚುನಾವಣೆ ಸಂದರ್ಭದಲ್ಲಿ ಬೆಲೆ ಏರಿಕೆ ಮಾಡದೇ, ಈಗ ಎರಡು-ಮೂರು ದಿನಕ್ಕೊಮ್ಮೆ ದರ ಹೆಚ್ಚಿಸಲಾಗುತ್ತಿದೆ. ಜನರ ಬದುಕಿನೊಂದಿಗೆ ಕೇಂದ್ರ ಸರ್ಕಾರ ಚೆಲ್ಲಾಟ ಆಡಬಾರದು" ಎಂದು ವಾಗ್ದಾಳಿ ನಡೆಸಿದರು.

**ಕೆಐಎಡಿಬಿ ಭೂಸ್ವಾಧೀನಕ್ಕೆ ರೈತರ ತೀವ್ರ ವಿರೋಧ: “ನಮ್ಮ ಭೂಮಿ ನಮ್ಮ ಹಕ್ಕು” ಘೋಷಣೆ**

# ಪ್ರಾಣ ಕೊಟ್ಟರೂ ಭೂಮಿ ಬಿಡೋದಿಲ್ಲ!

■ವಿಜಯಸಾಕ್ಷಿ ಸುದ್ದಿ, ಗದಗ

ನರಸಾಪುರ-ನಾಗಸಮುದ್ರ ಸರಹದ್ದಿನ ಫಲವತ್ತಾದ ಕೃಷಿಭೂಮಿಯನ್ನು ಕೆಐಎಡಿಬಿ ಮೂಲಕ ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಮುಂದಾಗಿರುವುದನ್ನು ಖಂಡಿಸಿ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿ ನಡೆಸಿದ ಕರವೇ ಎಚ್. ಶಿವರಾಮೇಗೌಡ ಬಣದ ಜಿಲ್ಲಾಧ್ಯಕ್ಷ ಎಂ.ಪಿ. ಪರ್ವತಗೌಡ್ರ ಮಾತನಾಡಿ, “ರೈತರ ವಿರೋಧದ ನಡುವೆಯೇ 250 ಎಕರೆಗಿಂತ ಹೆಚ್ಚು ಭೂಮಿಯನ್ನು ಕೆಐಎಡಿಬಿ ಅಧಿಕಾರಿಗಳು ಒತ್ತಾಯಪೂರ್ವಕವಾಗಿ ಸ್ವಾಧೀನಪಡಿಸಿಕೊಳ್ಳಲು ಮುಂದಾಗಿರುವುದು ಖಂಡನೀಯ” ಎಂದು ಹೇಳಿದರು.




ಈ ಹಿಂದೆ ಇದೇ ಭಾಗದಲ್ಲಿ 170 ಎಕರೆಗೂ ಅಧಿಕ ಭೂಮಿಯನ್ನು ಕೈಗಾರಿಕಾ ಪ್ರದೇಶಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾಗಿತ್ತು. ಬಳಿಕ ಚಿಕ್ಕೊಪ್ಪ-ನಾಗಸಮುದ್ರ ಮಧ್ಯದ ಸುಮಾರು 198 ಎಕರೆ ಭೂಮಿಯನ್ನು ಒಳಚರಂಡಿ ಶುದ್ಧೀಕರಣ ಘಟಕಕ್ಕಾಗಿ ವಶಪಡಿಸಿಕೊಳ್ಳಲಾಗಿದೆ. ಈಗ ಉಳಿದಿರುವ ಅಲ್ಪಭೂಮಿಯನ್ನೂ ಕಸಿದುಕೊಳ್ಳಲು ಮುಂದಾಗಿರುವುದರಿಂದ ರೈತರ ಬದುಕು ಸಂಕಷ್ಟಕ್ಕೆ ಸಿಲುಕಿದೆ ಎಂದು ಆರೋಪಿಸಿದರು.

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಅಧಿನಿಯಮ-1966ರ ನಿಯಮಗಳನ್ನು ಉಲ್ಲಂಘಿಸಲಾಗಿದೆ. ರೈತರಿಗೆ ನೀಡಿರುವ ನೋಟಿಸ್‌ಗಳನ್ನು ಮುಂದಿನ 15 ದಿನಗಳೊಳಗೆ ಹಿಂಪಡೆಯಬೇಕು. ಜೊತೆಗೆ ರೈತರ ವಿರೋಧದ ನಡುವೆಯೇ ಫಲವತ್ತಾದ ಜಮೀನಿನಲ್ಲಿ ವಿಂಡ್ ಫ್ಯಾನ್ ಅಳವಡಿಸುವ ಕಾರ್ಯವನ್ನು ತಕ್ಷಣ ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಪ್ರಗತಿಪರ ರೈತ ಯಮನೂರಸಾಬ ನದಾಫ್ ಮಾತನಾಡಿ, “ಅಭಿವೃದ್ಧಿ ಹೆಸರಿನಲ್ಲಿ ರೈತರ ಭೂಮಿ ಕಸಿದುಕೊಳ್ಳುವುದನ್ನು ನಾವು ಸಹಿಸುವುದಿಲ್ಲ. ಕೈಗಾರಿಕಾ ಪ್ರದೇಶಗಳನ್ನು

> “ಪ್ರಾಣ ಕೊಟ್ಟರೂ ಭೂಮಿ ಬಿಡುವುದಿಲ್ಲ. ನಮ್ಮ ಭೂಮಿಗೆ ಕೈ ಹಾಕಿದರೆ ರೈತರು ಸುಮ್ಮನಿರುವುದಿಲ್ಲ”
> **– ಮಲ್ಲಿಕಾರ್ಜುನ ಕಿರೇಸೂರ,** ಕರವೇ ಗೌರವಾಧ್ಯಕ್ಷ

ಸಚಿವರ ಕ್ಷೇತ್ರದಲ್ಲೇ ಸ್ಥಾಪಿಸಲಿ” ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ವಿರುದ್ಧ ವಾಗ್ದಾಳಿ ನಡೆಸಿದರು.

ಪ್ರಗತಿಪರ ಹೋರಾಟಗಾರ ಶಾಂತಯ್ಯ ಮುತ್ತಿನಪೆಂಡಿಮಠ ಮಾತನಾಡಿ, “ಕೆಐಎಡಿಬಿ ಹಾಗೂ ವಿಂಡ್ ಫ್ಯಾನ್ ಕಂಪನಿಗಳು ಭೂಸ್ವಾಧೀನ ಪ್ರಕ್ರಿಯೆಯನ್ನು ತಕ್ಷಣ ರದ್ದುಪಡಿಸಬೇಕು.

ಇಲ್ಲದಿದ್ದರೆ ರೈತರು ಮತ್ತು ಗ್ರಾಮಸ್ಥರೊಂದಿಗೆ ಅಹೋರಾತ್ರಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು” ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ರಾಜ್ಯ ಸಂಚಾಲಕ ಬಸಯ್ಯ ಗುಡ್ಡಿಮಠ, ಸಂತೋಷ ಹಿರೇಮಠ, ಕುಮಾರಗೌಡ ಬರಮಗೌಡ್ರ, ಯಶವಂತ ಉಪ್ಪಾರ, ಗುರುಯ್ಯ, ಶಾಂತಯ್ಯ, ಶಿವರಾಜ್ ಸೇರಿದಂತೆ ಅನೇಕ ರೈತ ಮುಖಂಡರು ಉಪಸ್ಥಿತರಿದ್ದರು.

**“ಮೊದಲ ಮಳೆಗೆ ಮಾಲವಿ ಜಲಾಶಯ ಫುಲ್ ಖುಷ್!”**

## ಮೊದಲ ಮಳೆಗೆ ಮೈದುಂಬಿದ ಮಾಲವಿ ಜಲಾಶಯ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನಾದ್ಯಂತ ಸುರಿದ ವರ್ಷದ ಮೊದಲ ಭಾರೀ ಮಳೆಯಿಂದ ಹಗರಿಬೊಮ್ಮನಹಳ್ಳಿ ತಾಲೂಕಿನ ಜೀವನಾಡಿಯಾಗಿರುವ ಮಾಲವಿ ಜಲಾಶಯಕ್ಕೆ ಹೊಸ ಜೀವಕಳೆ ಬಂದಿದೆ. ಜಲಾಶಯದತ್ತ ಮಳೆ ನೀರು ಹರಿದು ಬರುತ್ತಿರುವ ದೃಶ್ಯ ರೈತರಲ್ಲಿ ಹೊಸ ಭರವಸೆ ಮೂಡಿಸಿದೆ.

ಬೇಸಿಗೆಯ ತೀವ್ರ ಬಿಸಿಲಿನಿಂದ ನೀರಿನ ಮಟ್ಟ ಕುಸಿದಿದ್ದ ಜಲಾಶಯ, ಮೊದಲ ಮಳೆಯಲ್ಲೇ ಮತ್ತೆ ಚೇತರಿಕೆ ಕಾಣತೊಡಗಿದೆ. ಮಳೆಯ ಆಗಮನದಿಂದ ತಾಲೂಕಿನ ಜನರು ಹಾಗೂ ರೈತರು ಸಂತಸಗೊಂಡಿದ್ದು, ಕೃಷಿ ಚಟುವಟಿಕೆಗಳಿಗೆ ಹೊಸ ಚೈತನ್ಯ ದೊರೆತಂತಾಗಿದೆ.

ಇತ್ತೀಚೆಗೆ ಜಲಾಶಯದಲ್ಲಿ ಹೊಸ ಗೇಟ್ ಅಳವಡಿಕೆ ಕಾಮಗಾರಿ ಪೂರ್ಣಗೊಂಡಿದ್ದು, ಈ ಮಳೆಯೊಂದಿಗೆ ಅದರ ಉಪಯೋಗ ಸ್ಪಷ್ಟವಾಗತೊಡಗಿದೆ. ಹೊಸ ಗೇಟ್‌ನಿಂದ ನೀರಿನ ಸಂಗ್ರಹಣೆ ಹಾಗೂ ನಿರ್ವಹಣೆ ಸುಧಾರಣೆಯಾಗಲಿದ್ದು, ಮುಂದಿನ ದಿನಗಳಲ್ಲಿ ಕೃಷಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ರೈತರು ಅಭಿಪ್ರಾಯಪಟ್ಟಿದ್ದಾರೆ.

ಮಾಲವಿ ಜಲಾಶಯ ತಾಲೂಕಿಗೆ ಕುಡಿಯುವ ನೀರು ಹಾಗೂ ನೀರಾವರಿ ವ್ಯವಸ್ಥೆಯ ಪ್ರಮುಖ ಆಧಾರವಾಗಿದ್ದು, ಮೊದಲ ಮಳೆಯಲ್ಲೇ ಜಲಾಶಯಕ್ಕೆ ನೀರು ಹರಿದು ಬಂದಿರುವುದು ಸಾರ್ವಜನಿಕರಲ್ಲಿ ಸಂತಸ ಮೂಡಿಸಿದೆ.

**ಹೊನಲು ಬೆಳಕಿನ ಟೂರ್ನಿಗೆ ಚಾಲನೆ; ಕ್ರೀಡೆಗಳಿಂದ ಯುವಕರಿಗೆ ಶಿಸ್ತು-ನಾಯಕತ್ವ ಬೆಳೆಯುತ್ತದೆ**

# ಡಂಬಳದಲ್ಲಿ ರಾಜ್ಯಮಟ್ಟದ ವಾಲಿಬಾಲ್ ಸಂಭ್ರಮ

■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಾಮೀಣ ಭಾಗದ ಪ್ರತಿಭಾವಂತ ಕ್ರೀಡಾಪಟುಗಳಿಗೆ ರಾಜ್ಯಮಟ್ಟದ ಪಂದ್ಯಾವಳಿಗಳು ಉತ್ತಮ ಅವಕಾಶಗಳನ್ನು ಕಲ್ಪಿಸುತ್ತವೆ ಎಂದು ಡಂಬಳ ಮಠದ ವ್ಯವಸ್ಥಾಪಕ ಜಿ.ವಿ. ಹಿರೇಮಠ ಹೇಳಿದರು.

ಡಂಬಳ ಗ್ರಾಮದ ಜಗದ್ಗುರು ತೋಂಟದಾರ್ಯ ಕಲಾ ಭವನದ ಆವರಣದಲ್ಲಿ ಅಹಿಂದ ಜನತಾ ಸಂಘ (ರಿ) ಹಾಗೂ ಯೂಥ್ ಫಾರ್ ಚೇಂಜ್ ವೇದಿಕೆ ಆಶ್ರಯದಲ್ಲಿ ಆಯೋಜಿಸಿದ್ದ ಪ್ರಥಮ ರಾಜ್ಯಮಟ್ಟದ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

“ಕ್ರೀಡೆಗಳು ಯುವಕರಲ್ಲಿ ಶಿಸ್ತು, ಸಹಕಾರ ಮತ್ತು ನಾಯಕತ್ವ ಗುಣಗಳನ್ನು ಬೆಳೆಸುತ್ತವೆ. ಗ್ರಾಮೀಣ ಕ್ರೀಡಾಪಟುಗಳಿಗೆ ತಮ್ಮ ಪ್ರತಿಭೆ ಅನಾವರಣಗೊಳಿಸಲು ಇಂತಹ ಕ್ರೀಡಾಕೂಟಗಳು ಪ್ರೇರಣೆಯಾಗುತ್ತವೆ” ಎಂದು ಹೇಳಿದರು.



ದೇಹಿಕ ಶಿಕ್ಷಕ ಎಸ್. ಎಚ್. ಕೆಂಬಾವಿ ಮಾತನಾಡಿ, “ಇಂದಿನ ಯುವಜನತೆ ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯಿಂದ ದೂರವಿದ್ದು ಕ್ರೀಡಾಕ್ಷೇತ್ರದತ್ತ ಹೆಚ್ಚಿನ ಆಸಕ್ತಿ ತೋರಬೇಕು. ವಾಲಿಬಾಲ್‌ನಂತಹ ಕ್ರೀಡೆಗಳು ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಗೆ ಸಹಕಾರಿಯಾಗುತ್ತವೆ” ಎಂದು ತಿಳಿಸಿದರು.

ಶಿಕ್ಷಕ ಆರ್.ಜಿ. ಕೊರ್ಲಹಳ್ಳಿ ಮಾತನಾಡಿ, “ಗ್ರಾಮೀಣ ಪ್ರದೇಶಗಳಲ್ಲಿ ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ಇಂತಹ ಪಂದ್ಯಾವಳಿಗಳು ಮಹತ್ವದ ಪಾತ್ರವಹಿಸುತ್ತವೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ತಂಡಗಳು ಭಾಗವಹಿಸಿರುವುದು ಸಂತಸದ ಸಂಗತಿ” ಎಂದರು.

ಅಹಿಂದ ಜನತಾ ಸಂಘದ ಅಧ್ಯಕ್ಷ ಪ್ರಕಾಶ ಮೇಗೂರ ಹಾಗೂ ಪ್ರಧಾನ ಕಾರ್ಯದರ್ಶಿ ಗೋಪಾಲ ಗದಗಿನ ನೇತೃತ್ವದಲ್ಲಿ ಪಂದ್ಯಾವಳಿ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮಂಜುನಾಥ ನರಗುಂದ, ಶ್ರೀಕಾಂತ ಸಿರಗೇರಿ, ವೆಂಕಟೇಶ ಗದಗಿನ, ಭರಮಪ್ಪ ಮಂಗೋಜಿ, ರಾಜಾಭಕ್ಷಿ ಡಾಲಾಯತ, ಆದಿತ್ಯ ಗದಗಿನ, ಹರೀಶ ಯಲಭೋವಿ, ದಾವಲ ಬೆನಕೊಪ್ಪ, ಆಸೀಫ ತಾಂಬೋಟಿ, ಸಮೀರ ತಾಂಬೋಟಿ, ಬುಡ್ನೆಸಾಬ ಜಲಾಲನವರ, ಪ್ರವೀಣ ಅಡವಿಸೋಮಾಪುರ, ಶಬ್ಬಿರ ನಮಾಜಿ, ಅರುಣ ಚಿಲಕವಾಡ, ಶ್ರೀಧರ ಮಾಳಗಿ, ಅನೀಸ್ ತಾಂಬೋಟಿ, ಸೋಹಿಲ್ ದೊಡ್ಡಮನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

**ವಿದ್ಯಾರ್ಥಿಗಳು ಇಂದೇ ಭವಿಷ್ಯದ ಗುರಿ ನಿಗದಿಪಡಿಸಿಕೊಳ್ಳಲಿ : ಪ್ರಾಚಾರ್ಯ ವೈ.ಸಿ. ಪಾಟೀಲ**

# ಕನಸು ಕಾಣದವರಿಗೆ ಯಶಸ್ಸಿಲ್ಲ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

“ಜೀವನದಲ್ಲಿ ಏನಾಗಬೇಕು ಎಂಬ ಸ್ಪಷ್ಟ ಕನಸನ್ನು ವಿದ್ಯಾರ್ಥಿಗಳು ಇಂದೇ ಕಾಣಬೇಕು. ಗುರಿ ಸ್ಪಷ್ಟವಾಗಿದ್ದರೆ ಅದನ್ನು ಸಾಧಿಸುವ ದಾರಿಯೂ ತಾನಾಗಿಯೇ ತೆರೆದುಕೊಳ್ಳುತ್ತದೆ. ಕನಸಿಲ್ಲದ ಜೀವನ ಯಶಸ್ಸಿನ ಶಿಖರ ತಲುಪುವುದಿಲ್ಲ” ಎಂದು ಎಸ್‌ಎ ಪಿಯು ಕಾಲೇಜಿನ ಪ್ರಾಚಾರ್ಯ ವೈ.ಸಿ. ಪಾಟೀಲ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದ ಸಾಧನಾ ಕೋಚಿಂಗ್ ಸೆಂಟರ್‌ನ ಬೇಸಿಗೆ ತರಬೇತಿ ಶಿಬಿರದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಅಂಕ ಗಳಿಸುವುದು ಭವಿಷ್ಯದ ಭದ್ರ ಅಡಿಪಾಯವಾಗುತ್ತದೆ. ಪಿಯುಸಿ ಬಳಿಕ ವಿದ್ಯಾರ್ಥಿಗಳಿಗೆ ವೈದ್ಯಕೀಯ ಮತ್ತು ಇಂಜಿನಿಯರಿಂಗ್ ಕ್ಷೇತ್ರಗಳಷ್ಟೇ ಅಲ್ಲದೆ ಅನೇಕ ವೃತ್ತಿ ಅವಕಾಶಗಳು ಲಭ್ಯವಿವೆ. ವಿದ್ಯಾರ್ಥಿಗಳು ಈಗಿನಿಂದಲೇ ವಿವಿಧ ಕ್ಷೇತ್ರಗಳ ಬಗ್ಗೆ ಅರಿವು ಬೆಳೆಸಿಕೊಳ್ಳಬೇಕು ಎಂದು ಸಲಹೆ



> “ಕೇವಲ ಡಾಕ್ಟರ್ ಅಥವಾ ಇಂಜಿನಿಯರ್ ಆಗುವುದೇ ಸಾಧನೆ ಅಲ್ಲ; ಅದರಾಚೆಯೂ ಅಪಾರ ಅವಕಾಶಗಳಿವೆ”
> **–ವೈ.ಸಿ. ಪಾಟೀಲ, ಪ್ರಾಚಾರ್ಯ**

ನೀಡಿದರು.

ದತ್ತಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಮಾತನಾಡಿ, “ಕಷ್ಟಪಟ್ಟು ಓದುವುದಕ್ಕಿಂತ ಇಷ್ಟಪಟ್ಟು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಆರೋಗ್ಯವನ್ನು ಕಾಪಾಡಿಕೊಂಡೇ ಗುರಿ ಸಾಧನೆಗೆ ಶ್ರಮಿಸಬೇಕು” ಎಂದರು.

ಕೆಎಸ್‌ಎಸ್ ಪಿಯು ಕಾಲೇಜಿನ ಪ್ರಾಚಾರ್ಯ ಶಿವಾನಂದ ಗೋಗೇರಿ ಮಾತನಾಡಿ, “ವಿದ್ಯೆಯ ಜೊತೆಗೆ ಸಂಸ್ಕಾರವೂ ಅಗತ್ಯ. ಗುರುಹಿರಿಯರಿಗೆ ಗೌರವ ನೀಡುವ ಗುಣವನ್ನು ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು. ‘ವಿದ್ಯೆ ವಿನಯೇನ ಭೂಷತೆ’ ಎಂಬ ಮಾತಿನಂತೆ ವಿನಯವೇ ವ್ಯಕ್ತಿತ್ವದ ಅಲಂಕಾರ” ಎಂದು ಹೇಳಿದರು.

ಕಳೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇಕಡಾ 90 ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿಜಯಲಕ್ಷ್ಮಿ ಜುಟ್ಲ, ವೈಷ್ಣವಿ ಹದ್ದಣ್ಣವರ, ಅನುಪಮಾ ಗ್ರಾಮಪುರೋಹಿತ, ರೇಖಾ ಗಡಿಗಿ, ಜಯಶ್ರೀ ಕೊಟಗಿ, ಪ್ರಿಯಾಂಕಾ ಪುರದ ಹಾಗೂ ರಾಕೇಶ್ ಹೊನ್ನವಾಡ ಅವರನ್ನು ಸಂಸ್ಥೆಯ ವತಿಯಿಂದ ಸನ್ಮಾನಿಸಲಾಯಿತು.

ಉಪನ್ಯಾಸಕ ಮುತ್ತಣ್ಣ ಹೊನ್ನವಾಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಾಧನಾ ಕೋಚಿಂಗ್ ಸೆಂಟರ್ ಸಂಚಾಲಕ ವಿರುಪಾಕ್ಷಪ್ಪ ಸಂಗನಾಳ ಸ್ವಾಗತಿಸಿದರು. ನಂದೀಶ್ ಅಚ್ಚಿ ಅಧ್ಯಕ್ಷತೆ ವಹಿಸಿದ್ದರು.

ಪತ್ರಕರ್ತ ಮಲ್ಲಯ್ಯ ಗುಂಡುಗೋಪುರಮಠ, ಮಂಜುನಾಥ ಪಾಯಪ್ಪಗೌಡ್ರ, ಮುತ್ತಣ್ಣ ಗೆದಗೇರಿ, ಶೇಖಪ್ಪ ಹೊನ್ನವಾಡ, ಉದಯಕುಮಾರ ಸವದಿ, ಎಂ.ಎಸ್. ಹೊನ್ನವಾಡ, ದೇವರಡ್ಡಿ ಗುಲಗಂಜಿಕೊಪ್ಪ, ಶರಣಯ್ಯ ಬಾಗಲತ್ತಿಮಠ, ಕಿರಣ್ ರಂಜಣಗಿ, ಕಾವ್ಯ ಯಾಳಗಿ, ಅಕ್ಷತಾ ಕೆಳಗಡೆ ಹಾಗೂ ಸಾವಿತ್ರಿ ಸೂಡಿ ಉಪಸ್ಥಿತರಿದ್ದರು.

# ಜಂಗಮ ಸಮಾಜದ ಪ್ರತಿಭೆಗಳಿಗೆ ಪ್ರತಿಭಾ ಪುರಸ್ಕಾರ



■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ಜಂಗಮ ಸೇವಾ ಸಮಿತಿ ಹಾಗೂ ನರಸಾಪೂರದ ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕ ಗಳಿಸಿದ ಜಂಗಮ ಸಮಾಜದ 60 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಲಾಯಿತು.

ನಗರದ ಮುಳಗುಂದ ನಾಕಾ ಬಳಿಯ ಶ್ರೀ ಕುಮಾರೇಶ್ವರ ಧಾರ್ಮಿಕ ಪಾಠಶಾಲೆಯಲ್ಲಿ ರವಿವಾರ ನಡೆದ ಸಮಾರಂಭದಲ್ಲಿ ಅಧಿಕ ಮಾಸದ ಅಂಗವಾಗಿ ಜಂಗಮ ಸಮಾಜದ 33 ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮವೂ ಜರುಗಿತು.

ಗಜೇಂದ್ರಗಡದ ಕಾಲಜ್ಞಾನ ಸ್ವಾಮೀಜಿ ಮಾತನಾಡಿ, “ಸಮಾಜದ ಪ್ರತಿಭಾವಂತ ಮಕ್ಕಳನ್ನು ಗುರುತಿಸಿ

> “ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವುದು ಸಮಾಜದ ಭವಿಷ್ಯ ನಿರ್ಮಾಣದ ಮೊದಲ ಹೆಜ್ಜೆ”
> **–ಕಾಲಜ್ಞಾನ ಸ್ವಾಮೀಜಿ**

ಪ್ರೋತ್ಸಾಹಿಸುವುದು ಶ್ಲಾಘನೀಯ ಕಾರ್ಯ. ವಿದ್ಯಾರ್ಥಿಗಳನ್ನು ಉತ್ತಮ ವ್ಯಕ್ತಿತ್ವ ಹೊಂದಿದ ನಾಗರಿಕರಾಗಿ ರೂಪಿಸುವ ಉದ್ದೇಶದಿಂದ ಸಮಿತಿ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ” ಎಂದು ಹೇಳಿದರು.

ಕದಾಂಪೂರ ಹಿರೇಮಠದ ಡಾ. ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಅಖಿಲ ಭಾರತ ಜಂಗಮ ಸೇವಾ ಸಮಿತಿ ಹಾಗೂ ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್ ಸಹಯೋಗದಲ್ಲಿ ಈಗಾಗಲೇ ಐದು ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಸಾಮಾಜಿಕ ಹಾಗೂ ಶೈಕ್ಷಣಿಕ ಕಾರ್ಯಕ್ರಮಗಳನ್ನು ಜಂಟಿಯಾಗಿ ಆಯೋಜಿಸುವ ಯೋಜನೆ ಇದೆ ಎಂದು ತಿಳಿಸಿದರು. ಅಖಿಲ ಭಾರತ ಜಂಗಮ ಸೇವಾ ಸಮಿತಿಯ ಅಧ್ಯಕ್ಷ ಪ್ರಭಯ್ಯ ದಂಡಾವತಿಮಠ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವೆಂಕಟಾಪೂರ ಜಿಗೇರಿ ಗುರು ಸಿದ್ದೇಶ್ವರ ಶಿವಾಚಾರ್ಯರು, ಅಡ್ನೂರು-ರಾಜೂರು ಬ್ರಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ, ಮಲ್ಲಸಮುದ್ರ ಓಂಕಾರೇಶ್ವರ ಮಠದ ಫಕೀರೇಶ್ವರ ಸ್ವಾಮೀಜಿ, ಕುಮಾರೇಶ್ವರ ಧಾರ್ಮಿಕ ಪಾಠಶಾಲೆಯ ಶಿವಕುಮಾರ ದೇವರು, ನರಸಾಪೂರ ವೀರೇಶ್ವರ ಶರಣರ ಮಠದ ಶಿವಕುಮಾರ ಶರಣರು ಹಾಗೂ ಮಹೇಶ್ವರಯ್ಯ ಸ್ವಾಮಿಗಳು ಹೊಸಳ್ಳಿಮಠ ಸಮ್ಮುಖ ವಹಿಸಿದ್ದರು.

**‘ಹಿಂದೂ ಸಮಾಜದ ಏಕತೆಗೆ ಮಹಾಸಂಗಮ’ – ಲಕ್ಷ್ಮೇಶ್ವರ ಪೂರ್ವಭಾವಿ ಸಭೆಯಲ್ಲಿ ಮುಖಂಡರ ಕರೆ**

# ಮೇ 31ರ ಹಿಂದೂ ಸಮಾವೇಶ ಯಶಸ್ವಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇದೇ ತಿಂಗಳ 31ರಂದು ಗದಗದಲ್ಲಿ ನಡೆಯಲಿರುವ ಬಸವಾದಿ ಶಿವಶರಣ ಬೃಹತ್ ಹಿಂದೂ ಸಮಾವೇಶವು ಸಮಾಜಕ್ಕೆ ಮಹತ್ವದ ಸಂದೇಶ ನೀಡಲಿದ್ದು, ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಹಿಂದೂ ಸಂಘಟನೆಗಳ ಮುಖಂಡ ರಾಜು ಖಾನಪ್ಪನವರ ಕರೆ ನೀಡಿದರು.

ಪಟ್ಟಣದ ಶ್ರೀ ವೀರಗಂಗಾಧರ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಕನ್ನೇರಿಮಠದ ಅದೃಶ್ಯ ಕಾಡಸಿದ್ದೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ನಡೆಯಲಿರುವ ಈ ಸಮಾವೇಶ ಹಿಂದೂ ಸಮಾಜದ ಒಗ್ಗಟ್ಟಿಗೆ ವೇದಿಕೆಯಾಗಲಿದೆ ಎಂದರು.

ಬಸವಧರ್ಮದ ಹೆಸರಿನಲ್ಲಿ ಸಮಾಜವನ್ನು ವಿಭಜಿಸಲು ಯತ್ನಿಸುವ ಶಕ್ತಿಗಳನ್ನು ತಡೆಯುವ ಉದ್ದೇಶದಿಂದ ಸಮಾವೇಶ ಹಮ್ಮಿಕೊಳ್ಳಲಾಗಿದ್ದು, ಪ್ರತಿಯೊಬ್ಬ ಹಿಂದೂ ತನು-ಮನ-ಧನಗಳಿಂದ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ಯುವಕರು, ಮಹಿಳೆಯರು ಹಾಗೂ ಹಿರಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಿದರು.

ಹಿರಿಯ ಮುಖಂಡ ವೆಂಕಟೇಶ ಕುಲಕರ್ಣಿ ಮಾತನಾಡಿ, ಜಾತಿ-ಭೇದ ಮರೆತು ಹಿಂದೂ ಸಮಾಜ ಒಗ್ಗೂಡುವ ಅಗತ್ಯವಿದೆ ಎಂದು ಹೇಳಿದರು. ದೇಶ, ನಾಡು-ನುಡಿ ಹಾಗೂ ಸಂಸ್ಕೃತಿ ರಕ್ಷಣೆಗೆ ಎಲ್ಲರೂ ಒಂದೇ ವೇದಿಕೆಯಲ್ಲಿ ಸೇರುವ ಕಾಲ ಬಂದಿದೆ ಎಂದರು. ಜಿಲ್ಲೆಯ ಗ್ರಾಮಗ್ರಾಮಗಳಲ್ಲಿ ಸಮಾವೇಶದ ಕುರಿತು ಜಾಗೃತಿ ಮೂಡಿಸಲಾಗುತ್ತಿದ್ದು, ಸುಮಾರು 40ರಿಂದ 50 ಸಾವಿರ ಜನ ಭಾಗವಹಿಸುವ ನಿರೀಕ್ಷೆ ಇದೆ ಎಂದು ತಿಳಿಸಿದರು.

ಸುಮಾರು 200ಕ್ಕೂ ಅಧಿಕ ಮಠಾಧೀಶರು



> “ಹಿಂದೂ ಸಮಾಜದ ಒಗ್ಗಟ್ಟು ಮತ್ತು ಜಾಗೃತಿಗೆ ಈ ಸಮಾವೇಶ ಐತಿಹಾಸಿಕ ವೇದಿಕೆಯಾಗಲಿದೆ.”
> **–ರಾಜು ಖಾನಪ್ಪನವರ, ಹಿಂದೂ ಸಂಘಟನೆಗಳ ಮುಖಂಡ**

ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, 4000ಕ್ಕೂ ಹೆಚ್ಚು ಮಹಿಳೆಯರಿಂದ ಕುಂಭಮೇಳದೊಂದಿಗೆ ಭವ್ಯ ಶೋಭಾಯಾತ್ರೆ ನಡೆಯಲಿದೆ ಎಂದು ಹೇಳಿದರು.

ಶ್ರೀಧರ ಕುಲಕರ್ಣಿ ಮಾತನಾಡಿ, ಹಿಂದೂ ಸಮಾಜಕ್ಕೆ ಜಾಗೃತಿ ಮೂಡಿಸುವ ಕಾರ್ಯದಲ್ಲಿ ತೊಡಗಿರುವ ಶ್ರೀಗಳಿಗೆ ಎಲ್ಲರೂ ಬೆಂಬಲ ನೀಡಬೇಕು ಎಂದು ಹೇಳಿದರು.

ಸ್ಥಳೀಯ ಮುಖಂಡರಾದ ಚಂಬಣ್ಣ ಬಾಳಿಕಾಯಿ, ನಿಂಗಪ್ಪ ಬನ್ನಿ, ಹೊನ್ನಪ್ಪ ವಡ್ಡರ, ಮಂಜುನಾಥ ಹೊಗೆಸೊಪ್ಪಿನ, ಅನಿಲ ಮುಳಗುಂದ ಹಾಗೂ ಗಂಗಾಧರ ಮೆಣಸಿನಕಾಯಿ ಮಾತನಾಡಿ, ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಮಾವೇಶಕ್ಕೆ ಭಾಗವಹಿಸುವಂತೆ ಕರೆ ನೀಡಿದರು.

ಸಭೆಯಲ್ಲಿ ವಿಜಯ ಮಹಾಂತಶೆಟ್ಟರ, ಕೆ.ಎಸ್. ಹಿರೇಮಠ, ಗುರುರಾಜ ಪಾಟೀಲ ಕುಲಕರ್ಣಿ, ಈರಣ್ಣ ಪೂಜಾರ, ಶಿವಯೋಗಿ ಅಂಕಲಕೋಟಿ, ಮಹೇಶ ಕಲಘಟಗಿ, ಬಾಳಪ್ಪ ಗೋಸಾವಿ, ನೀಲಪ್ಪ ಹತ್ತಿ, ಅಮಿತ ಗುಡಗೇರಿ, ಮುತ್ತಣ್ಣ ಕರ್ಜಕಣ್ಣವರ, ಪ್ರವೀಣ ಬೋಮಲೆ, ನವೀನ ಹಿರೇಮಠ, ಪ್ರಾಣೇಶ ವ್ಯಾಪಾರಿ, ಶಂಕರ ಬ್ಯಾಡಗಿ, ವಿಜಯ ಕುಂಬಾರ, ರಾಜು ಕಳ್ಳಿ, ಖಂಡೋಬಾ ನವಲೆ, ಕಿರಣ ಚಿಲ್ಲೂರಮಠ, ಭರಮಣ್ಣ ಶೇರಸೂರಿ, ಚಿನ್ನು ಹಾಳದೊಡ್ಡಿ, ಬಸವರಾಜ ಕಲ್ಲೂರ, ವೈಭವ ಗೋಗಿ ಹಾಗೂ ಅಭಿಷೇಕ ಉಮಚಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಇಂದು ಉಚಿತ ಆರೋಗ್ಯ ತಪಾಸಣಾ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ 'ಗೃಹ ಆರೋಗ್ಯ ಯೋಜನೆ' ಅಡಿಯಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಮೇ 26ರಂದು ಮಂಗಳವಾರ ನಗರದ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದ ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಮಂಗಳವಾರ ಬೆಳಿಗ್ಗೆ 9ರಿಂದ ಮಧ್ಯಾಹ್ನ 12 ಗಂಟೆಯವರೆಗೆ ನಡೆಯುವ ಶಿಬಿರದಲ್ಲಿ ತಜ್ಞ ವೈದ್ಯರ ತಂಡದಿಂದ ರಕ್ತದೊತ್ತಡ (ಬಿಪಿ), ಮಧುಮೇಹ (ಶುಗರ್) ಸೇರಿದಂತೆ ವಿವಿಧ ಆರೋಗ್ಯ ತಪಾಸಣೆಗಳನ್ನು ನಡೆಸಲಾಗುತ್ತದೆ.

ಶಿಬಿರಕ್ಕೆ ಆಗಮಿಸುವವರು ಆಧಾರ್ ಕಾರ್ಡ್, ಪ್ರಸ್ತುತ ಬಳಸುತ್ತಿರುವ ಔಷಧಿಗಳ ಚೀಟಿ ಹಾಗೂ ಅಗತ್ಯ ದಾಖಲೆಗಳನ್ನು ಕಡ್ಡಾಯವಾಗಿ ತರಬೇಕು ಎಂದು ತಿಳಿಸಲಾಗಿದೆ. 30 ವರ್ಷ ಮೇಲ್ಪಟ್ಟ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷ ಎ.ಟಿ. ನರೇಗಲ್ಲ ಮನವಿ ಮಾಡಿದ್ದಾರೆ.

# ಮೊಬೈಲ್ ಕ್ಯಾಂಟೀನ್ ವಾಹನಕ್ಕೆ ಸಚಿವ ಪಾಟೀಲ ಚಾಲನೆ

▶▶ ಮೊದಲನೇ ಪುಟದಿಂದ

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ತಾಲ್ಲೂಕು ಅಧ್ಯಕ್ಷ ಅಶೋಕ ಮಂದಾಲಿ, ನೀಲವ್ವ ಬೋಳನವರ, ಮಾಜಿ ಶಾಸಕ ರಾಮಣ್ಣ ಲಮಾಣಿ, ಪಾರುಕ್ ಹುಬ್ಬಳ್ಳಿ ಸೇರಿದಂತೆ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ವಿಭೂತಿ ಹಾಗೂ ಇತರ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಕೆಳಮಟ್ಟದಿಂದಲೇ ಆಡಳಿತ ರೂಪಿಸುವುದು ಗ್ರಾಮ ಸ್ವರಾಜ್ಯದ ಗುರಿ : ಸಚಿವ ಎಚ್.ಕೆ. ಪಾಟೀಲ

# ಜನರ ಯೋಜನೆಗಳೇ ಜಿಲ್ಲೆಯ ಅಭಿವೃದ್ಧಿಗೆ ದಿಕ್ಕು

■ ವಿಜಯಸಾಕ್ಷಿ ಸುದ್ದಿ, ಗದಗ

ಜನರಿಂದಲೇ ಅಭಿವೃದ್ಧಿ ಯೋಜನೆಗಳು ರೂಪುಗೊಳ್ಳಬೇಕು. ಕೆಳಮಟ್ಟದಿಂದ ಮೇಲ್ಮಟ್ಟದವರೆಗೆ ಆಡಳಿತ ವ್ಯವಸ್ಥೆ ಬಲಪಡಿಸುವ ಉದ್ದೇಶದಿಂದ ಜಿಲ್ಲಾ ಯೋಜನಾ ಸಮಿತಿ ರಚಿಸಲಾಗಿದ್ದು, ಇದು ಐತಿಹಾಸಿಕ ಹೆಜ್ಜೆಯಾಗಿದೆ ಎಂದು ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು




ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ನಡೆದ ಜಿಲ್ಲಾ ಯೋಜನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಂಚಾಯತ್ ರಾಜ್ ಕಾನೂನು ಅನುಷ್ಠಾನಗೊಳಿಸುವಲ್ಲಿ ಗದಗ ಜಿಲ್ಲೆ ದಿಟ್ಟ ಹೆಜ್ಜೆ ಇಟ್ಟಿದೆ. ಗ್ರಾಮ ಮಟ್ಟದಲ್ಲೇ ಸಭೆಗಳನ್ನು ನಡೆಸಿ ಜನಾಭಿಪ್ರಾಯ ಸಂಗ್ರಹಿಸುವ ಮೂಲಕ ಅಭಿವೃದ್ಧಿ ಯೋಜನೆ ರೂಪಿಸಲಾಗುತ್ತಿದೆ. ಜನರ ಕಲ್ಯಾಣಕ್ಕಾಗಿ ಯೋಜನಾ ಸಮಿತಿ ಮಹತ್ವದ ಪಾತ್ರ ವಹಿಸಲಿದ್ದು, ಮುಂದಿನ ದಿನಗಳಲ್ಲಿ ಗದಗ ಜಿಲ್ಲೆಯ ಯೋಜನೆಗಳು ರಾಜ್ಯಕ್ಕೆ ಮಾದರಿಯಾಗಬೇಕು ಎಂದು ಸಚಿವರು ಹೇಳಿದರು.

ಮುಂದಿನ ಆಯವ್ಯಯ ತಯಾರಿಕೆಗೆ ಜನರ ಅಭಿಪ್ರಾಯ ಮತ್ತು ಸ್ಥಳೀಯ ಅಗತ್ಯತೆಗಳು ಆಧಾರವಾಗಬೇಕು. ಜನರ ಆಲೋಚನೆಗಳಿಗೆ ಸ್ಫೂರ್ತಿ ತುಂಬುವ ಕಾರ್ಯ ಅತ್ಯಂತ ಮುಖ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಲಕ್ಕುಂಡಿ ಐತಿಹಾಸಿಕ ಪ್ರದೇಶ ಅಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ವಿವಿಧ ನೂತನ ಸೌಲಭ್ಯಗಳೊಂದಿಗೆ ನಿರ್ಮಾಣವಾಗುತ್ತಿರುವ ಕೆ.ಎಚ್. ಪಾಟೀಲ ಜಿಲ್ಲಾ ಆಸ್ಪತ್ರೆ ಸೇರಿದಂತೆ ಜಿಲ್ಲೆಯ ಹಲವು ಅಭಿವೃದ್ಧಿ ಯೋಜನೆಗಳ ಕುರಿತು ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ರಾಮ ಪಂಚಾಯತಿಯಿಂದ ತಾಲೂಕು ಪಂಚಾಯಿತಿ, ಅಲ್ಲಿಂದ ಜಿಲ್ಲಾ ಪಂಚಾಯಿತಿ ಮಟ್ಟದವರೆಗೆ ಅಭಿವೃದ್ಧಿ ಯೋಜನೆಗಳನ್ನು ಸಂಗ್ರಹಿಸಿ ಅನುಷ್ಠಾನಗೊಳಿಸಿದಾಗ ಮಾತ್ರ ಮಹಾತ್ಮ ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸು ನನಸಾಗುತ್ತದೆ ಎಂದು ಹೇಳಿದರು.

ಸಭೆಯಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಮಾಜಿ ಶಾಸಕ ರಾಮಣ್ಣ ಲಮಾಣಿ, ಎಲ್.ಡಿ. ಚಂದಾವರಿ, ಕೃಷ್ಣ ಪರಾಪೂರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

> "ಜನರ ಪಾಲ್ಗೊಳ್ಳುವಿಕೆಯಿಂದ ರೂಪುಗೊಳ್ಳುವ ಯೋಜನೆಗಳೇ ಶಾಶ್ವತ ಅಭಿವೃದ್ಧಿಗೆ ಅಡಿಪಾಯ."
> – ಡಾ. ಎಚ್.ಕೆ. ಪಾಟೀಲ, ಜಿಲ್ಲಾ ಉಸ್ತುವಾರಿ ಸಚಿವ

### "ಗದಗ ದೇಶಕ್ಕೆ ಮಾದರಿ ಆಗಬೇಕು"


ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಮಾತನಾಡಿ, ಸಂವಿಧಾನದ ಆಶಯಗಳಿಗೆ ತಕ್ಕಂತೆ ಜನರ ಭಾವನೆಗಳನ್ನು ಅರಿತು ಜಿಲ್ಲಾ ಯೋಜನಾ ಸಮಿತಿ ಕಾರ್ಯನಿರ್ವಹಿಸಬೇಕು ಎಂದರು.

2027-28ನೇ ಸಾಲಿನ ಅಭಿವೃದ್ಧಿ ಯೋಜನೆಗಳು ಜನರಿಂದಲೇ ರೂಪುಗೊಳ್ಳುವಂತಾಗಬೇಕು.

ಈ ನಿಟ್ಟಿನಲ್ಲಿ ಗದಗ ಜಿಲ್ಲೆ ದೇಶದಲ್ಲೇ ಮಾದರಿಯಾಗಬೇಕು. ಆಗ ಮಾತ್ರ ಗ್ರಾಮರಾಜ್ಯ ಮತ್ತು ರಾಮರಾಜ್ಯದ ಕನಸು ಸಾಕಾರವಾಗುತ್ತದೆ ಎಂದು ಹೇಳಿದರು.

### "ಸಮಾಜದ ಋಣ ತೀರಿಸಿದವರು ಬಿ.ಡಿ. ಹರ್ತಿ" : ಪ್ರಭುಲಿಂಗ ದೇವರು

# ಪ್ರತಿಭಾವಂತರ ಬೆನ್ನಿಗೆ ನಿಂತ ಹಾಲುಮತ ಸಮಾಜ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ತಂದೆ-ತಾಯಿ, ಗುರುಗಳು ಮತ್ತು ಸಮಾಜದ ಋಣ ತೀರಿಸುವ ಕಾರ್ಯವನ್ನು ಬಿ.ಡಿ. ಹರ್ತಿ ಮಾಡುತ್ತಿದ್ದಾರೆ ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಹೇಳಿದರು.

ಪಟ್ಟಣದ ಬೀರಲಿಂಗೇಶ್ವರ ಸೇವಾ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಹಾಲುಮತ ಸಮಾಜದ ಪ್ರತಿಭಾವಂತ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

"ಇಂದಿನ ಎಐ ತಂತ್ರಜ್ಞಾನದ ಯುಗದಲ್ಲಿ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಜಗತ್ತಿಗೆ ಸಜ್ಜಾಗಬೇಕು. ಮಕ್ಕಳನ್ನು ದೇವರಂತೆ ಕಂಡು ಅವರ ಶಿಕ್ಷಣ ಹಾಗೂ ಭವಿಷ್ಯಕ್ಕಾಗಿ ತನು-ಮನ-ಧನದಿಂದ ಸಹಕಾರ ನೀಡುತ್ತಿರುವ ಬಿ.ಡಿ. ಹರ್ತಿ ಅವರ ಕಾರ್ಯ ಶ್ಲಾಘನೀಯ" ಎಂದು ಹೇಳಿದರು.

ಡಾ. ಆರ್.ಎಂ. ಕಲ್ಲನಗೌಡ್ರ ಮಾತನಾಡಿ, "ಸತತ ಪ್ರಯತ್ನದಿಂದಲೇ ಯಶಸ್ಸು ಸಾಧ್ಯ. ವಿದ್ಯಾರ್ಥಿಗಳು ಪಾಠದ ವೇಳೆ ಗುರುಗಳ ಬೋಧನೆಗೆ ಗಮನಹರಿಸಿದಾಗ ಮಾತ್ರ ಸಾಧನೆ ಮಾಡಲು ಸಾಧ್ಯವಾಗುತ್ತದೆ" ಎಂದರು.

ಗದಗ ತಾಲೂಕಿನ ಹಾಲುಮತ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸಮಾರಂಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಸಮಾರಂಭದಲ್ಲಿ ಫಕ್ಕೀರಯ್ಯ ಅಮೋಘಿಮಠ, ಬಿ.ಡಿ. ಹರ್ತಿ, ಡಾ. ಎಸ್.ಸಿ. ಚವಡಿ, ಬಸವರಾಜ ಬಡ್ನಿ, ಬಿ.ವಿ. ಸುಂಕಾಪೂರ, ಬಸವರಾಜ ಹಾರೋಗೇರಿ, ಮಹಾಂತಪ್ಪ ನೀಲಗುಂದ, ಮಲ್ಲಪ್ಪ ಕುಂದಗೋಳ, ಅಶೋಕ ಹುಣಶಿಮರದ, ಆರ್.ಎಂ. ಕಲ್ಲನಗೌಡ್ರ ಸೇರಿದಂತೆ ಹಾಲುಮತ ಸಮಾಜದ ಹಿರಿಯರು ಉಪಸ್ಥಿತರಿದ್ದರು.

### ಅಲ್ಪಸಂಖ್ಯಾತರ ಬೇಡಿಕೆ ಈಡೇರಿಕೆಗೆ ಅಂಜುಮನ್ ಇಸ್ಲಾಂ ಕಮಿಟಿ ಆಗ್ರಹ

# 2ಬಿ ಮೀಸಲಾತಿ ಮರು ಜಾರಿಗೊಳಿಸಿ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಅಲ್ಪಸಂಖ್ಯಾತ ಸಮುದಾಯದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಅಂಜುಮನ್ ಇಸ್ಲಾಂ ಕಮಿಟಿ ಹಾಗೂ ತಾಲೂಕು ಮುಸ್ಲಿಂ ಸಮಾಜದ ಸದಸ್ಯರು ತಹಸೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಅಂಜುಮನ್ ಇಸ್ಲಾಂ ಕಮಿಟಿ ನಿರ್ದೇಶಕ ಹಾಗೂ ವಕೀಲ ದಾವಲಸಾಬ ತಾಳಿಕೋಟಿ, "ಅಲ್ಪಸಂಖ್ಯಾತರ ಹಿತ ಕಾಯುವುದಾಗಿ ಹೇಳಿದ್ದ ರಾಜ್ಯ ಸರ್ಕಾರ ಚುನಾವಣೆ ಪೂರ್ವದ ಭರವಸೆಗಳನ್ನು ಈಡೇರಿಸುವಲ್ಲಿ ವಿಫಲವಾಗಿದೆ" ಎಂದು ಆರೋಪಿಸಿದರು.

ಬಿಜೆಪಿ ಸರ್ಕಾರ ರದ್ದುಪಡಿಸಿದ್ದ ಮುಸ್ಲಿಮರ 2ಬಿ ಮೀಸಲಾತಿಯನ್ನು ಮರು ಜಾರಿಗೆ ತರಲು ಇಂದಿನ ಸರ್ಕಾರವೂ ಮುಂದಾಗದಿರುವುದು ಬೇಸರದ ಸಂಗತಿ ಎಂದು ಹೇಳಿದರು.

ಟಿಪ್ಪು ಸುಲ್ತಾನ್ ಜಯಂತಿ ಆಚರಣೆಗೆ ಸರ್ಕಾರ ಸ್ಪಷ್ಟ ನಿಲುವು ತಾಳುತ್ತಿಲ್ಲ. ಸಾರ್ವಜನಿಕ ಆಚರಣೆಗೆ ಅವಕಾಶ ಕಲ್ಪಿಸದಿರುವುದು ಸರ್ಕಾರದ ದ್ವಂದ್ವ ನೀತಿಯನ್ನು ತೋರಿಸುತ್ತದೆ ಎಂದು ಟೀಕಿಸಿದರು.

ಅಂಜುಮನ್ ಇಸ್ಲಾಂ ಕಮಿಟಿ ಕಾರ್ಯದರ್ಶಿ ಫಯಾಜ್ ತೆ-ೂಟದ ಮಾತನಾಡಿ, "ಹಿಜಾಬ್ ನಿರ್ಬಂಧ ತೆರವುಗೊಳಿಸಿದರೂ 2ಬಿ ಮೀಸಲಾತಿ, ವಿದ್ಯಾರ್ಥಿ ವೇತನ, ರಾಜಕೀಯ ಪ್ರಾತಿನಿಧ್ಯ ಸೇರಿದಂತೆ ಹಲವು ವಿಷಯಗಳಲ್ಲಿ ಸರ್ಕಾರ ಸಮುದಾಯದ ನಿರೀಕ್ಷೆ ಈಡೇರಿಸಿಲ್ಲ" ಎಂದು ಹೇಳಿದರು.

2ಬಿ ಮೀಸಲಾತಿಯನ್ನು ಶೇ.4ರಿಂದ ಶೇ.8ಕ್ಕೆ ಹೆಚ್ಚಿಸಿ ಜಾರಿಗೆ ತರಬೇಕು. ವಿಶೇಷ ಮತದಾರರ ಪರಿಷ್ಕರಣೆ (SIR) ಜಾರಿಗೊಳಿಸಬಾರದು. ದ್ವೇಷ ಭಾಷಣ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಅಂಜುಮನ್ ಇಸ್ಲಾಂ ಕಮಿಟಿ ಅಧ್ಯಕ್ಷ ಹಸನಸಾಬ ತಟಗಾರ ಮಾತನಾಡಿ, ಜನಸಂಖ್ಯೆಗೆ ಅನುಗುಣವಾಗಿ ಅಲ್ಪಸಂಖ್ಯಾತರಿಗೆ ರಾಜಕೀಯ ಪ್ರಾತಿನಿಧ್ಯ ನೀಡಬೇಕು ಎಂದು ಆಗ್ರಹಿಸಿದರು.

ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ ಮನವಿ ಸ್ವೀಕರಿಸಿ ಮೇಲಾಧಿಕಾರಿಗಳಿಗೆ ರವಾನಿಸುವುದಾಗಿ ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ನಾಸೀರ ಅಲಿ ಸುರಪುರ, ಎ.ಕೆ. ಕಾತರಕಿ, ಅಬ್ಬಾಸಲಿ ನಿಶಾನದಾರ, ಫಕ್ರುಸಾಬ ಕಾತರಕಿ, ಮಾಬುಸಾಬ ಸುರಪುರ, ರಜಾಕ ಢಾಲಾಯತ್, ಖಾಸಿಂಸಾಬ ಅಲಿ ದಿಂಡವಾಡ ಸೇರಿದಂತೆ ಸೂಡಿ, ವದೇಗೋಳ ಹಾಗೂ ರಾಜೂರು ಗ್ರಾಮದ ಸಮುದಾಯದ ಮುಖಂಡರು ಮತ್ತು ಸದಸ್ಯರು ಉಪಸ್ಥಿತರಿದ್ದರು.

#### ಪ್ರಮುಖ ಬೇಡಿಕೆಗಳು

- 2ಬಿ ಮೀಸಲಾತಿ ಮರು ಜಾರಿಗೊಳಿಸಬೇಕು
- ವಿಶೇಷ ಮತದಾರರ ಪರಿಷ್ಕರಣೆ (SIR) ಜಾರಿಗೆ ತರಬಾರದು
- ದ್ವೇಷ ಭಾಷಣಕಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು
- ಟಿಪ್ಪು ಸುಲ್ತಾನ್ ಜಯಂತಿ ಆಚರಣೆಗೆ ಮುಕ್ತ ಅವಕಾಶ ನೀಡಬೇಕು
- ಅಲ್ಪಸಂಖ್ಯಾತರಿಗೆ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಬೇಕು
- ವಿದ್ಯಾರ್ಥಿ ವೇತನ ಹೆಚ್ಚಿಸಿ ತ್ವರಿತ ಮಂಜೂರು ಮಾಡಬೇಕು

### ಸಮರ್ಥ ವಕೀಲರು, ನ್ಯಾಯಾಧೀಶರನ್ನು ರೂಪಿಸುವ ಶಕ್ತಿ ಕೇಂದ್ರ : ಮಾಜಿ ನ್ಯಾಯಮೂರ್ತಿ ಬಿ.ಎ. ಪಾಟೀಲ

# ಅಣಕು ನ್ಯಾಯಾಲಯಗಳೇ ಭವಿಷ್ಯದ ನ್ಯಾಯಾಂಗದ ಪ್ರಯೋಗಶಾಲೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು ಕ್ಷೇತ್ರದಲ್ಲಿ ಯಶಸ್ಸು ಸಾಧಿಸಲು ಕೇವಲ ಪದವಿ ಸಾಕಾಗುವುದಿಲ್ಲ. ವಾದ ಸಾಮರ್ಥ್ಯ, ಕಾನೂನು ಜ್ಞಾನ, ನೈತಿಕತೆ ಹಾಗೂ ಸಮಾಜದ ಮೇಲಿನ ಹೊಣೆಗಾರಿಕೆ ಬೆಳೆಸಿಕೊಂಡಾಗ ಮಾತ್ರ ಉತ್ತಮ ವಕೀಲರು ಮತ್ತು ನ್ಯಾಯಾಧೀಶರಾಗಲು ಸಾಧ್ಯ ಎಂದು ಕರ್ನಾಟಕ ಹೈಕೋರ್ಟ್‌ನ ಮಾಜಿ ನ್ಯಾಯಮೂರ್ತಿ ಬಿ.ಎ. ಪಾಟೀಲ ಹೇಳಿದರು.

ನಗರದ ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಕೆಎಲ್‌ಇ ಕಾನೂನು ಅಕಾಡೆಮಿಯ 3ನೇ ರಾಷ್ಟ್ರೀಯ ಅಣಕು ನ್ಯಾಯಾಲಯ ಸ್ಪರ್ಧೆಯ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

"ಇಂದಿನ ದಿನಗಳಲ್ಲಿ ಕಾನೂನು ಕ್ಷೇತ್ರದಲ್ಲಿ ಸ್ಪರ್ಧೆ ಹೆಚ್ಚಾಗಿದೆ. ವಾಗ್ಮಿತೆ, ತಾರ್ಕಿಕ ಚಿಂತನೆ, ಸಂಶೋಧನಾ ಸಾಮರ್ಥ್ಯ ಮತ್ತು ಕ್ಷಣಾರ್ಧದಲ್ಲಿ ಕಾನೂನು ಅಂಶ ಮಂಡಿಸುವ ಕೌಶಲ್ಯ ಅಗತ್ಯವಾಗಿದೆ. ಈ ಎಲ್ಲ ಗುಣಗಳನ್ನು ಬೆಳೆಸುವ ಅತ್ಯುತ್ತಮ ವೇದಿಕೆಯೇ ಅಣಕು ನ್ಯಾಯಾಲಯ" ಎಂದು ಹೇಳಿದರು.

ಕರ್ನಾಟಕ ಹೈಕೋರ್ಟ್‌ನ ಮಾಜಿ ನ್ಯಾಯಮೂರ್ತಿ ಉಮೇಶ್ ಅಡಿಗ ಮಾತನಾಡಿ, ಅಣಕು ನ್ಯಾಯಾಲಯ ಸ್ಪರ್ಧೆಗಳು ವಿದ್ಯಾರ್ಥಿಗಳಿಗೆ ನ್ಯಾಯಾಂಗದ ಪ್ರಾಯೋಗಿಕ ಅನುಭವ ನೀಡುವುದರ ಜೊತೆಗೆ ಆತ್ಮವಿಶ್ವಾಸವನ್ನೂ ಬೆಳೆಸುತ್ತವೆ. ಇಂತಹ ಸ್ಪರ್ಧೆಗಳು ಭವಿಷ್ಯದ ಸಮರ್ಥ ನ್ಯಾಯಾಧೀಶರು ಹಾಗೂ ವಕೀಲರನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದರು.

ಜಿಲ್ಲಾ ಗ್ರಾಹಕ ಪರಿಹಾರ ಆಯೋಗದ ಅಧ್ಯಕ್ಷ ಎಂ.ಐ. ಶಿಗ್ಲಿ ಮಾತನಾಡಿ, "ನ್ಯಾಯ, ಸಮಾನತೆ ಮತ್ತು ಸಂವಿಧಾನದ ಮೌಲ್ಯಗಳನ್ನು ಉಳಿಸುವ ಹೊಣೆಗಾರಿಕೆ ಯುವಕರ ಮೇಲಿದೆ. ಅಣಕು ನ್ಯಾಯಾಲಯಗಳು ಕೇವಲ ಸ್ಪರ್ಧೆಗಳಲ್ಲ; ಅವು ದೇಶದ ಭವಿಷ್ಯದ ನ್ಯಾಯಾಂಗವನ್ನು ರೂಪಿಸುವ ಶಕ್ತಿ ಕೇಂದ್ರಗಳಾಗಿವೆ" ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಬೆಂಗಳೂರಿನ ಕೆಎಲ್‌ಇ ಕಾನೂನು ಕಾಲೇಜಿನ ಪ್ರಾಚಾರ್ಯ ಪ್ರೊ. ಡಾ. ಜೆ.ಎಂ. ಮಲ್ಲಿಕಾರ್ಜುನಯ್ಯ ಮಾತನಾಡಿ, ಪಠ್ಯಾಧಾರಿತ ಜ್ಞಾನಕ್ಕಿಂತ ಹೊರತಾಗಿ ನ್ಯಾಯಾಂಗದ ನೈಜ ಪ್ರಕ್ರಿಯೆಗಳನ್ನು ವಿದ್ಯಾರ್ಥಿಗಳು ಅರ್ಥಮಾಡಿಕೊಳ್ಳಲು ಇಂತಹ ರಾಷ್ಟ್ರೀಯ ಮಟ್ಟದ ಸ್ಪರ್ಧೆಗಳು ಅತ್ಯಂತ ಅಗತ್ಯ ಎಂದರು.

ಸ್ಪರ್ಧೆಯಲ್ಲಿ ಬೆಂಗಳೂರಿನ ಬಿ.ಎಂ.ಎಸ್ ಕಾನೂನು ಕಾಲೇಜು ಅತ್ಯುತ್ತಮ ಪ್ರದರ್ಶನ ನೀಡಿ ಚಾಂಪಿಯನ್ ಪಟ್ಟ ತನ್ನದಾಗಿಸಿಕೊಂಡಿತು. ಹುಬ್ಬಳ್ಳಿಯ ಕೆಎಲ್‌ಇ ಸೊಸೈಟಿಯ ಜಿಕೆ ಕಾನೂನು ಕಾಲೇಜು ರನ್ನರ್ಸ್ ಅಪ್ ಸ್ಥಾನ ಪಡೆದಿತು.

ಅತ್ಯುತ್ತಮ ಮೆಮೋರಿಯಲ್ ಪ್ರಶಸ್ತಿಯನ್ನು ಬೆಂಗಳೂರಿನ ಕೆಎಲ್‌ಇ ಕಾನೂನು ಕಾಲೇಜು ಪಡೆದುಕೊಂಡಿತು. ಅತ್ಯುತ್ತಮ ಮಹಿಳಾ ನ್ಯಾಯವಾದಿ ಪ್ರಶಸ್ತಿ ಬೆಂಗಳೂರಿನ ವಿವೇಕಾನಂದ ಕಾನೂನು ಕಾಲೇಜಿನ ವಿಜುಷಾ ಅವರಿಗೆ ಲಭಿಸಿತು. ಅತ್ಯುತ್ತಮ ಪುರುಷ ನ್ಯಾಯವಾದಿ ಪ್ರಶಸ್ತಿಯನ್ನು ಹುಬ್ಬಳ್ಳಿಯ ಕೆಎಸ್‌ಎಲ್‌ಯು ಕಾನೂನು ಕಾಲೇಜಿನ ದರ್ಶನ್ ಪಡೆದರು.

ಸಮಾರಂಭದಲ್ಲಿ ಸ್ಥಳೀಯ ಮಂಡಳಿಯ ಅಧ್ಯಕ್ಷ ಎಸ್.ಎ. ಮಾನ್ವಿ, ಸದಸ್ಯರಾದ ಎಸ್.ಎಫ್. ಹಾದಿಮನಿ, ಎಸ್.ಜಿ. ಶಿಳ್ಳಿಕೇರಿ, ಎಸ್.ಎ. ಮಾನ್ವಿ ಕಾನೂನು ಕಾಲೇಜಿನ ಪ್ರಾಚಾರ್ಯ ಡಾ. ಸಂಜೀವ ಹುಲ್ಲೂರ, ಉಪನ್ಯಾಸಕರಾದ ಡಾ. ವಿಜಯ ಮುರದಂಡೆ, ಡಾ. ಶ್ರೀನಿವಾಸ ಪಾಲಗೊಂಡ, ಡಾ. ಜ್ಯೋತಿ ಸಿ.ವಿ., ಡಾ. ಸಿ.ವಿ. ರಣಗಟ್ಟಿಮಠ ಸೇರಿದಂತೆ ವಕೀಲರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.




> "ಅಣಕು ನ್ಯಾಯಾಲಯಗಳು ಕೇವಲ ಟ್ರೋಫಿ ಗೆಲ್ಲುವ ವೇದಿಕೆಗಳಲ್ಲ; ಅವು ನ್ಯಾಯಾಂಗದ ಭವಿಷ್ಯ ರೂಪಿಸುವ ತರಬೇತಿ ಕೇಂದ್ರಗಳು"
> – ಎಂ.ಐ. ಶಿಗ್ಲಿ, ಜಿಲ್ಲಾ ಗ್ರಾಹಕ ಪರಿಹಾರ ಆಯೋಗದ ಅಧ್ಯಕ್ಷ

### ಪೆಟ್ರೋಲ್ ಬಂಕ್‌ಗಳ ಮುಂದೆ ಟ್ರ್ಯಾಕ್ಟರ್, ಕ್ಯಾನ್‌ಗಳ ಸಾಲು – ಸಂಕಷ್ಟದಲ್ಲಿ ರೈತರು!

# ಬಿತ್ತನೆ ಹೊತ್ತಲ್ಲೇ ಡಿಸೇಲ್ ಬರ!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಂಗಾರು ಚುರುಕುಗೊಂಡ ಬೆನ್ನಲ್ಲೇ ಬಿತ್ತನೆ ಸಿದ್ಧತೆಯಲ್ಲಿ ತೊಡಗಿರುವ ರೈತರಿಗೆ ಇದೀಗ ಡಿಸೇಲ್ ಕೊರತೆ ದೊಡ್ಡ ಸಂಕಷ್ಟವಾಗಿ ಪರಿಣಮಿಸಿದೆ. ಪಟ್ಟಣ ಹಾಗೂ ತಾಲೂಕಿನ ಹಲವು ಪೆಟ್ರೋಲ್ ಬಂಕ್‌ಗಳಲ್ಲಿ ಡಿಸೇಲ್ ಖಾಲಿಯಾಗಿರುವ ಪರಿಣಾಮ ರೈತರು ಗಂಟೆಗಟ್ಟಲೆ ಸಾಲಿನಲ್ಲಿ ನಿಂತು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.

ಕಳೆದ ಎರಡು-ಮೂರು ತಿಂಗಳಿಂದ ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ನಡೆಯುತ್ತಿರುವ ಯುದ್ಧದ ಪರಿಣಾಮ ದೇಶದ ಇಂಧನ ಸರಬರಾಜಿನ ಮೇಲೂ ಪರಿಣಾಮ ಬೀರಿದ್ದು, ಪೆಟ್ರೋಲ್, ಡಿಸೇಲ್ ಮತ್ತು ಅಡುಗೆ ಅನಿಲ ದರ ಏರಿಕೆಯ ನಡುವೆ ಇದೀಗ ಡಿಸೇಲ್ ಅಭಾವ ತೀವ್ರಗೊಂಡಿದೆ ಎನ್ನಲಾಗುತ್ತಿದೆ.

ಪಟ್ಟಣದಲ್ಲಿ ಸುಮಾರು 8ರಿಂದ 10 ಪೆಟ್ರೋಲ್ ಬಂಕ್‌ಗಳಿದ್ದು, ಶನಿವಾರ ಸಂಜೆದಿಂದಲೇ ಡಿಸೇಲ್ ಪಡೆಯಲು ರೈತರು ಟ್ರ್ಯಾಕ್ಟರ್, ಬೈಕ್, ಕ್ಯಾನ್‌ಗಳೊಂದಿಗೆ ಬಂಕ್‌ಗಳ ಮುಂದೆ ಮುಗಿಬಿದ್ದರು. ರವಿವಾರ ಮಧ್ಯಾಹ್ನದ ವೇಳೆಗೆ ಬಹುತೇಕ ಎಲ್ಲ ಬಂಕ್‌ಗಳಲ್ಲಿ ಡಿಸೇಲ್ ಸಂಪೂರ್ಣ ಖಾಲಿಯಾಗಿದ್ದು, ಅನೇಕ ರೈತರು ಬರಿಗೈಯಲ್ಲಿ ಹಿಂದಿರುಗುವಂತಾಯಿತು.

ಮುಂಗಾರು ಪೂರ್ವ ಮಳೆ ಉತ್ತಮವಾಗಿ ಸುರಿದಿರುವುದರಿಂದ ರೈತರು ಜಮೀನು ಸಜ್ಜುಗೊಳಿಸುವ ಕಾರ್ಯದಲ್ಲಿ ತೊಡಗಿದ್ದಾರೆ. ಈಗ ಬಹುತೇಕ ಕೃಷಿ ಚಟುವಟಿಕೆಗಳು ಟ್ರ್ಯಾಕ್ಟರ್ ಅವಲಂಬಿತವಾಗಿರುವುದರಿಂದ ಡಿಸೇಲ್ ಇಲ್ಲದೆ ಉಳುಮೆ, ಹರಗು, ಬಿತ್ತನೆ ಕಾರ್ಯಗಳು ಸ್ಥಗಿತಗೊಳ್ಳುವ ಭೀತಿ ಎದುರಾಗಿದೆ.

ಶನಿವಾರ ಕೆಲ ಬಂಕ್‌ಗಳ ಮುಂದೆ ಟ್ರ್ಯಾಕ್ಟರ್‌ಗಳ ಸರದಿ ಸಾಲು ಕಿಲೋಮೀಟರ್‌ವರೆಗೆ ವಿಸ್ತರಿಸಿತ್ತು. ರವಿವಾರ ಮುಂಜಾನೆಯಿಂದಲೇ ನೂರಾರು ಕ್ಯಾನ್‌ಗಳೊಂದಿಗೆ ಜನರು ಸಾಲಿನಲ್ಲಿ ನಿಂತ ದೃಶ್ಯ ಕಂಡುಬಂದಿತು.

ಕೆಲವೆಡೆ ಕ್ಯಾನ್‌ಗೆ ಕೇವಲ ಎರಡು ಸಾವಿರ ರೂಪಾಯಿವರೆಗೆ ಮಾತ್ರ ಡಿಸೇಲ್ ನೀಡಲಾಗಿದ್ದು, ರೈತರು ಹಲವು ಕ್ಯಾನ್‌ಗಳನ್ನು ಹೊತ್ತು ತರಬೇಕಾದ ಪರಿಸ್ಥಿತಿ ಉಂಟಾಯಿತು.

ಪಟ್ಟಣದ ಜೊತೆಗೆ ಶಿಗ್ಲಿ, ಸೂರಣಗಿ, ಗೊಜನೂರು, ಬಾಲೇಹೊಸೂರು, ಮಾಡಳ್ಳಿ, ಯಳವತ್ತಿ ಸೇರಿದಂತೆ ತಾಲೂಕಿನ ಹಲವು ಗ್ರಾಮಗಳ ರೈತರೂ ಡಿಸೇಲ್ ಕೊರತೆಯಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ. ಕೆಲವರು ಡಿಸೇಲ್ ಸಂಗ್ರಹಿಸಿಟ್ಟುಕೊಂಡಿದ್ದಾರೆ ಎಂಬ ಆರೋಪವೂ ಕೇಳಿಬರುತ್ತಿದೆ.

ಹೆಸರು, ಶೇಂಗಾ, ಸೋಯಾಬಿನ್, ಉದ್ದು ಸೇರಿದಂತೆ ವಿವಿಧ ಬೆಳೆಗಳ ಬಿತ್ತನೆಗೆ ರೈತರು ಸಿದ್ಧರಾಗುತ್ತಿರುವ ಸಂದರ್ಭದಲ್ಲಿ ಡಿಸೇಲ್ ಕೊರತೆ ಕೃಷಿ ಚಟುವಟಿಕೆಗಳ ಮೇಲೆಯೇ ನೇರ ಪರಿಣಾಮ ಬೀರುವ ಆತಂಕ ಎದುರಾಗಿದೆ.



> "ಬಿತ್ತನೆ ಹಂಗಾಮಿನಲ್ಲಿ ಒಂದು ದಿನ ವ್ಯತ್ಯಯವಾದರೂ ರೈತರಿಗೆ ದೊಡ್ಡ ಹೊಡೆತ ಬೀಳುತ್ತದೆ. ಡಿಸೇಲ್ ಕೊರತೆ ನಿವಾರಣೆಗೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು."
> – ನಂದೀಶ ಬಂಡಿವಾಡ, ರೈತ

#### ರೈತರ ಸಂಕಷ್ಟ ಏನು?

- ಟ್ರ್ಯಾಕ್ಟರ್ ಉಳುಮೆಗೆ ಡಿಸೇಲ್ ಸಿಗದೆ ಪರದಾಟ
- ಪೆಟ್ರೋಲ್ ಬಂಕ್‌ಗಳ ಮುಂದೆ ಕಿ.ಮೀ.ವರೆಗೆ ಸಾಲು
- ಕ್ಯಾನ್‌ಗೆ ಮಿತ ಪ್ರಮಾಣದ ಡಿಸೇಲ್ ವಿತರಣೆ
- ಬಿತ್ತನೆ ಕಾರ್ಯ ವಿಳಂಬವಾಗುವ ಭೀತಿ
- ತಾಲೂಕಿನ ಗ್ರಾಮೀಣ ಭಾಗಗಳಲ್ಲಿಯೂ ಇಂಧನ ಕೊರತೆ ತೀವ್ರ

# ಇಂಧನ ದರ ಏರಿಕೆಗೆ ವೆಲ್ಫೇರ್ ಪಾರ್ಟಿ ಆಕ್ರೋಶ

▶▶ ಮೊದಲನೇ ಪುಟದಿಂದ

ಪೆಟ್ರೋಲ್ ಹಾಗೂ ಡೀಸೆಲ್ ದರ ಏರಿಕೆಯನ್ನು ತಕ್ಷಣ ಹಿಂಪಡೆಯಬೇಕು. ಕೇಂದ್ರದ ಅಬಕಾರಿ ಸುಂಕ ಮತ್ತು ರಾಜ್ಯದ ಗಿಂಖಿ ತೆರಿಗೆ ಕಡಿತಗೊಳಿಸಬೇಕು. ಗೃಹ ಹಾಗೂ ವಾಣಿಜ್ಯ ಐಕಲು ಸಿಲಿಂಡರ್ ದರ ಇಳಿಸಿ ಜನರಿಗೆ ಪರಿಹಾರ ನೀಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಜನವಿರೋಧಿ ಆರ್ಥಿಕ ನೀತಿಗಳ ವಿರುದ್ಧ ಪ್ರಜಾಸತ್ತಾತ್ಮಕ ಶಕ್ತಿಗಳು ಹಾಗೂ ನಾಗರಿಕ ಸಮಾಜ ಒಗ್ಗಟ್ಟಿನಿಂದ ಧ್ವನಿ ಎತ್ತಬೇಕು ಎಂದು ವೆಲ್ಫೇರ್ ಪಾರ್ಟಿ ಕರೆ ನೀಡಿದೆ.

**ಸೇವಾ ಭದ್ರತೆ ಇಲ್ಲದೆ ಅತಿಥಿ ಉಪನ್ಯಾಸಕರ ನರಳಾಟ; ಸರ್ಕಾರದ ವಿರುದ್ಧ ಒಕ್ಕೂಟ ಆಕ್ರೋಶ**

# ಜ್ಞಾನದೀಪ ಹಚ್ಚುವ ಗುರುಗಳ ಬದುಕೇ ಕತ್ತಲೆ!



■ವಿಜಯಸಾಕ್ಷಿ ಸುದ್ದಿ, ಗದಗ

ಉನ್ನತ ಶಿಕ್ಷಣ ವ್ಯವಸ್ಥೆಯ ಬೆನ್ನೆಲುಬಾಗಿರುವ ಅತಿಥಿ ಉಪನ್ಯಾಸಕರು ಇಂದು ಉದ್ಯೋಗ ಭದ್ರತೆ, ಸಮರ್ಪಕ ವೇತನ ಮತ್ತು ಮಾನವೀಯ ಗೌರವವಿಲ್ಲದೆ ಸಂಕಷ್ಟದ ಬದುಕು ನಡೆಸುತ್ತಿದ್ದಾರೆ ಎಂದು ಉತ್ತರ ಕರ್ನಾಟಕ ಪದವೀಧರರ ಒಕ್ಕೂಟದ ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟಿ ಆಕ್ರೋಶ ವ್ಯಕ್ತಪಡಿಸಿದರು.

ಒಕ್ಕೂಟದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, "ವಿಶ್ವವಿದ್ಯಾಲಯಗಳು ಹಾಗೂ ಸರ್ಕಾರಿ ಕಾಲೇಜುಗಳಲ್ಲಿ ಶೇಕಡಾ 60ಕ್ಕೂ ಹೆಚ್ಚು ಬೋಧನಾ ಹೊಣೆಗಾರಿಕೆಯನ್ನು ಅತಿಥಿ ಉಪನ್ಯಾಸಕರೇ ಹೊತ್ತಿದ್ದಾರೆ. ವರ್ಷಪೂರ್ತಿ ತರಗತಿ, ಪರೀಕ್ಷೆ, ಮೌಲ್ಯಮಾಪನ ಸೇರಿದಂತೆ ಪೂರ್ಣಕಾಲಿಕ ಉಪನ್ಯಾಸಕರಿಗಿಂತ ಹೆಚ್ಚು ದುಡಿದರೂ ಅವರಿಗೆ ಸಿಗುವುದು ಅಲ್ಪ ಸಂಭಾವನೆ ಮತ್ತು ಅನಿಶ್ಚಿತ ಭವಿಷ್ಯ" ಎಂದು ಹೇಳಿದರು.

NET, SLET ಹಾಗೂ ಪಿಎಚ್‌ಡಿ ಪದವಿಗಳೊಂದಿಗೆ ಅರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರು ಆರ್ಥಿಕವಾಗಿ ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ತಿಂಗಳುಗಟ್ಟಲೆ ವೇತನ ವಿಳಂಬವಾಗುವುದರಿಂದ ಮನೆ ಬಾಡಿಗೆ, ಮಕ್ಕಳ ಶಿಕ್ಷಣ ಹಾಗೂ ಕುಟುಂಬ ನಿರ್ವಹಣೆ ಕಷ್ಟವಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

"ಪ್ರತಿ ಶೈಕ್ಷಣಿಕ ವರ್ಷದ ಅಂತ್ಯದಲ್ಲಿ 'ಮುಂದಿನ ವರ್ಷ ಕೆಲಸ ಸಿಗುತ್ತದೆಯೇ?' ಎಂಬ ಆತಂಕ ಅವರನ್ನು ಕಾಡುತ್ತಿದೆ. ಸೇವಾ ಹಿರಿತನ, ರಜೆ, ಆರೋಗ್ಯ ಭದ್ರತೆ ಸೇರಿದಂತೆ ಯಾವುದೇ ಮೂಲಭೂತ ಸೌಲಭ್ಯವೂ ಇಲ್ಲದಿರುವುದು ದುರಂತ" ಎಂದರು.

ಒಂದೇ ಕಾಲೇಜಿನಲ್ಲಿ ಸಮಾನ ಅರ್ಹತೆ ಮತ್ತು ಸಮಾನ ಕೆಲಸ ಮಾಡುತ್ತಿದ್ದರೂ ಖಾಯಂ ಉಪನ್ಯಾಸಕರಿಗೆ ಸಿಗುವ ಸೌಲಭ್ಯಗಳು ಅತಿಥಿ ಉಪನ್ಯಾಸಕರಿಗೆ ದೊರೆಯುತ್ತಿಲ್ಲ. ಇದು 'ಸಮಾನ ಕೆಲಸಕ್ಕೆ ಸಮಾನ ವೇತನ' ಎಂಬ ಸಂವಿಧಾನದ ಆಶಯಕ್ಕೂ ವಿರುದ್ಧವಾಗಿದೆ ಎಂದು ಟೀಕಿಸಿದರು.

ಅತಿಥಿ ಉಪನ್ಯಾಸಕರಿಗೆ ತಕ್ಷಣ ಸೇವಾ ಭದ್ರತೆ, ಸೇವಾ ಹಿರಿತನ ಹಾಗೂ ಮಾನವೀಯ ಪರಿಗಣನೆಯೊಂದಿಗೆ ಸಮರ್ಪಕ ವೇತನ ನೀಡಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ದಯಾನಂದ ಮುಂಡರಗಿ, ರಾಜೇಶ್ ಹದ್ಲಿ, ಎಸ್. ಆರ್. ಕುಲಕರ್ಣಿ, ಕೆ.ಆರ್. ಸುಣಗಾರ, ಅನೀಸ್ ಅಹ್ಮದ್ ಪಟೇಲ್, ನ್ಯಾಯವಾದಿಗಳಾದ ಎಂ.ಐ. ಮುಲ್ಲಾ, ವೀರೇಶ ಪರಸಣ್ಣವರ, ಎಂ.ಎಂ. ಶಿರಹಟ್ಟಿ, ಬಸವರಾಜ್ ಬಡಿಗೇರ, ಅಶೋಕ್ ಗೌಡರ, ಪ್ರಕಾಶ ಹಿರೇಮಠ, ಮೇಘರಾಜ್ ಕೊಲ್ಲೂರ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳ ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

> "ಜ್ಞಾನದ ದೀಪ ಹಚ್ಚುವ ಶಿಕ್ಷಕರ ಬದುಕೇ ಅಸ್ಥಿರವಾದರೆ ಶಿಕ್ಷಣ ವ್ಯವಸ್ಥೆಯ ಭವಿಷ್ಯ ಹೇಗೆ ಸುರಕ್ಷಿತವಾಗಿರುತ್ತದೆ?"
> – ಮಹ್ಮದಶಫಿ ನಾಗರಕಟ್ಟಿ

---

**ವಿಶ್ವಕರ್ಮ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ; "ಸಂಸ್ಕಾರವೇ ಬದುಕಿನ ಸೌಂದರ್ಯ" ಎಂದ ಅಭಿನವ ಯಚ್ಚರ ಸ್ವಾಮೀಜಿ**

# ಪ್ರತಿಭೆಗೆ ಸನ್ಮಾನ, ಸಂಸ್ಕಾರಕ್ಕೆ ಸಮ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿ ಜೀವನ ಅತ್ಯಮೂಲ್ಯವಾದುದು. ವಿದ್ಯಾವಂತರಾಗುವುದರೊಂದಿಗೆ ಪ್ರಜ್ಞಾವಂತಿಕೆಯನ್ನೂ ಬೆಳೆಸಿಕೊಳ್ಳಬೇಕು. ತಂದೆ–ತಾಯಿ ಹಾಗೂ ಗುರುಹಿರಿಯರು ಹೇಳುವ ಸಂಸ್ಕಾರಯುತ ವಿಚಾರಗಳನ್ನು ಅಳವಡಿಸಿಕೊಂಡಾಗ ಬದುಕು ಸುಂದರವಾಗುತ್ತದೆ ಎಂದು ಶಿರೋಳ ಜಗದ್ಗುರು ಯಚ್ಚರಸ್ವಾಮಿಗಳ ಸಂಸ್ಥಾನ ಗವಿಮಠದ ಶ್ರೀ ಅಭಿನವ ಯಚ್ಚರ ಮಹಾಸ್ವಾಮೀಜಿ ಹೇಳಿದರು.

ನಗರದ ಗಂಗಿಮಡಿ ಕ್ರಾಸ್ ಹತ್ತಿರದ ವಿಜಯನಗರ ಬಡಾವಣೆಯ ವಿಶ್ವಕರ್ಮ ಭವನದಲ್ಲಿ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 8ನೇ ವರ್ಷದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ, ಕಲಿಕಾ ಸಾಮಗ್ರಿ ವಿತರಣೆ, ವಿಶ್ವಕರ್ಮ ನೌಕರಶ್ರೀ–ಸಾಧಕಶ್ರೀ ಪ್ರಶಸ್ತಿ ಪ್ರದಾನ ಹಾಗೂ ನಿವೃತ್ತ ದಂಪತಿಗಳ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

"ವಿದ್ಯೆ ಮತ್ತು ಅಂಕಗಳು ಬದುಕಿಗೆ ಆಸರೆಯಾಗಬಹುದು. ಆದರೆ ಸಂಸ್ಕಾರ ಬದುಕನ್ನು ಸುಂದರಗೊಳಿಸುತ್ತದೆ. ಪ್ರತಿಯೊಬ್ಬ ಮಗು ಶಿಕ್ಷಣವಂತರಾದಾಗ ಸುಶಿಕ್ಷಿತ ಸಮಾಜ ನಿರ್ಮಾಣವಾಗುತ್ತದೆ. ಸಮಾಜ ಸಂಘಟನೆಗೂ ಅದು ಬಲ ನೀಡುತ್ತದೆ" ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ. ಕಡ್ಲಿಕೊಪ್ಪ ಮಾತನಾಡಿ, "ಸಮಾಜದ ಮಕ್ಕಳನ್ನು ಉತ್ತಮ ಶಿಕ್ಷಣವಂತರನ್ನಾಗಿಸುವುದರೊಂದಿಗೆ ಸಮಾಜ ಸಂಘಟನೆಯ ಅರಿವು ಮೂಡಿಸಬೇಕು. ಈ ವರ್ಷದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ 140ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿ ಪುರಸ್ಕೃತರಾಗಿರುವುದು ಹೆಮ್ಮೆಯ ಸಂಗತಿ" ಎಂದರು.



"ವಿದ್ಯಾರ್ಥಿಗಳು ಐಎಎಸ್, ಐಪಿಎಸ್, ಐಎಫ್‌ಎಸ್, ಕೆಎಎಸ್ ಸೇರಿದಂತೆ ಉನ್ನತ ಹುದ್ದೆಗಳ ಗುರಿ ಇಟ್ಟುಕೊಳ್ಳಬೇಕು. ಸಂಘಟನೆ ಅವರ ಶಿಕ್ಷಣಕ್ಕೆ ಅಗತ್ಯ ಸಹಕಾರ ನೀಡಲಿದೆ. ಪಂಚಕಸಬುಗಳ ತರಬೇತಿ ಕೇಂದ್ರ ಹಾಗೂ ವಸತಿ ನಿಲಯ ನಿರ್ಮಾಣಕ್ಕೂ ಸಮಾಜದವರು ಕೈಜೋಡಿಸಬೇಕು" ಎಂದು ಕರೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನಿರ್ದೇಶಕ ಕೆ.ಡಿ. ಬಡಿಗೇರ ಮಾತನಾಡಿ, "ತಪಸ್ಸಿನಂತೆ ಅಧ್ಯಯನ ಮಾಡಿದಾಗ ಮಾತ್ರ ಯಶಸ್ಸು ಸಾಧ್ಯ. ವಿದ್ಯಾರ್ಥಿಗಳು ಮೊಬೈಲ್ ಹಾಗೂ ಮನೋರಂಜನೆಗಳಿಂದ ದೂರವಿದ್ದು ಉತ್ತಮ ಸಂಸ್ಕಾರಗಳೊಂದಿಗೆ ಬದುಕು ರೂಪಿಸಿಕೊಳ್ಳಬೇಕು" ಎಂದು ಸಲಹೆ ನೀಡಿದರು.

ಯಾದಗಿರಿ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಮೌನೇಶ ಕೆಂಭಾವಿ, ಧಾರವಾಡ ಜಿಲ್ಲಾ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಅಧ್ಯಕ್ಷ ಕಾಳಪ್ಪ ವ್ಹಿ. ಬಡಿಗೇರ, ರಾಯಚೂರ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಡಾ. ಮನೋಹರ ವಾಯ್. ಪತ್ತಾರ, ಧಾರವಾಡ ಜಿಲ್ಲಾ ವಿಶ್ವಕರ್ಮ ನೌಕರರ ಹಾಗೂ ನಿವೃತ್ತ ನೌಕರರ ಸಂಘದ ಅಧ್ಯಕ್ಷ ವಿಠ್ಠಲ ಜಿ. ಕಮ್ಮಾರ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

> "ವಿದ್ಯೆ ಬದುಕಿಗೆ ಆಸರೆ ನೀಡಿದರೆ, ಸಂಸ್ಕಾರ ಬದುಕಿಗೆ ಸೌಂದರ್ಯ ತರುತ್ತದೆ"
> – ಶ್ರೀ ಅಭಿನವ ಯಚ್ಚರ ಮಹಾಸ್ವಾಮೀಜಿ

ಹಾವೇರಿ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಈರಪ್ಪ ಶ. ಪಂಚಾನನ, ಬಾಗಲಕೋಟ ತಾಲೂಕು ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ದೇವೇಂದ್ರಪ್ಪ ಮ. ಅಗಲತಕಟ್ಟ, ರಾಯಚೂರ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಪ್ರಧಾನ ಕಾರ್ಯದರ್ಶಿ ಕೆ. ರಾಮು ಗಾಣದಾಳ, ಕೊಪ್ಪಳ ತಾಲೂಕು ವಿಶ್ವಕರ್ಮ ಸಮಾಜದ ಅಧ್ಯಕ್ಷ ದೇವೇಂದ್ರಪ್ಪ ಎಚ್. ಬಡಿಗೇರ, ಕೊಪ್ಪಳ ಜಿಲ್ಲಾ ವಿಶ್ವಕರ್ಮ ನೌಕರರ ನಿರ್ದೇಶಕ ಹಾಗೂ ಸಮಾಜದ ಕಾರ್ಯಾಧ್ಯಕ್ಷ ರುದ್ರಪ್ಪ ಕೆ. ಬಡಿಗೇರ, ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಗೌರವ ಅಧ್ಯಕ್ಷ ಎ.ಎನ್. ಬಡಿಗೇರ, ನಿರ್ದೇಶಕರಾದ ಬಿ.ಎಂ. ಬಡಿಗೇರ, ಕೆ.ಎಸ್. ಬಡಿಗೇರ, ಶಿವಲೀಲಾ ಕೆ. ಬಡಿಗೇರ, ಬಿ.ಎಂ. ಯರಕದ, ಮೌನೇಶ ಸಿ. ಬಡಿಗೇರ (ನರೇಗಲ್ಲ), ಮಹೇಶ ಕಮ್ಮಾರ, ವಿಶ್ವನಾಥ ಯ. ಕಮ್ಮಾರ, ರಿಂದಮ್ಮ ತೋಟಗಂಟಿ, ಕಸ್ತೂರಿಬಾಯಿ ಕಮ್ಮಾರ, ಡಾ. ಸಿ.ವಿ. ಬಡಿಗೇರ ಸೇರಿದಂತೆ ಅನೇಕ ಗಣ್ಯರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

### 140ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪುರಸ್ಕಾರ

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ 140ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು. ಸಮಾಜದ ವಿವಿಧ ಕ್ಷೇತ್ರಗಳ ಸಾಧಕರಿಗೆ "ವಿಶ್ವಕರ್ಮ ಸಾಧಕಶ್ರೀ" ಹಾಗೂ "ವಿಶ್ವಕರ್ಮ ನೌಕರಶ್ರೀ" ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು. ನಿವೃತ್ತ ನೌಕರ ದಂಪತಿಗಳಿಗೂ ಸನ್ಮಾನ ನಡೆಯಿತು.

ಕಾರ್ಯಕ್ರಮದಲ್ಲಿ ಸಮಾಜದ ಸಾಧಕರಿಗೆ "ವಿಶ್ವಕರ್ಮ ಸಾಧಕಶ್ರೀ" ಹಾಗೂ "ವಿಶ್ವಕರ್ಮ ನೌಕರಶ್ರೀ" ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು. ನಿವೃತ್ತ ನೌಕರ ದಂಪತಿಗಳು ಹಾಗೂ ವಿಶೇಷ ಸನ್ಮಾನಿತರಿಗೆ ಗೌರವ ಸಮರ್ಪಿಸಲಾಯಿತು.

ಆರಂಭದಲ್ಲಿ ಲಕ್ಕೇಶ್ವರದ ಶ್ರೀಧರ ದೇ. ಬಡಿಗೇರ ಹಾಗೂ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಡಾ. ಗಿರೀಶ ಬಡಿಗೇರ ಸ್ವಾಗತಿಸಿದರು. ರಾಜಗೋಪಾಲ ಡಿ. ಕಡ್ಲಿಕೊಪ್ಪ ಪ್ರಸ್ತಾವಿಕ ನುಡಿಗಳಾಡಿದರು. ಸುಮಂಗಲಾ ಪತ್ತಾರ ಕಾರ್ಯಕ್ರಮ ನಿರೂಪಿಸಿದರು. ಸಿ.ಎಂ. ಪತ್ತಾರ ವಂದಿಸಿದರು.

---

# ಎಸ್‌ಬಿಐ ಖಾತೆಗಳನ್ನು ನರೇಗಲ್ಲ ಶಾಖೆಗೆ ವರ್ಗಾಯಿಸಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗ್ರಾಹಕರ ಅನುಕೂಲಕ್ಕಾಗಿ ಭಾರತೀಯ ಸ್ಟೇಟ್ ಬ್ಯಾಂಕ್ ನರೇಗಲ್ಲ ಪಟ್ಟಣ ಪಂಚಾಯತಿಯ ಮೊದಲ ಮಹಡಿಯಲ್ಲಿ ನೂತನ ಶಾಖೆ ಆರಂಭಿಸಿದ್ದು, ಬೇರೆ ಊರಿನ ಎಸ್‌ಬಿಐ ಉಳಿತಾಯ ಖಾತೆಗಳನ್ನು ನರೇಗಲ್ಲ ಶಾಖೆಗೆ ವರ್ಗಾಯಿಸಿಕೊಳ್ಳುವಂತೆ ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಮನವಿ ಮಾಡಿದರು.

ಪಟ್ಟಣದ ನಿವೃತ್ತ ಸೈನಿಕರ ಕಚೇರಿಯಲ್ಲಿ ನಡೆದ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

"ಖಾತೆ ವರ್ಗಾವಣೆ ಮಾಡಿಕೊಂಡರೆ ಗ್ರಾಹಕರು ಬ್ಯಾಂಕಿನ ಎಲ್ಲ ಸೌಲಭ್ಯಗಳನ್ನು ಸ್ಥಳೀಯವಾಗಿಯೇ ಸುಲಭವಾಗಿ ಪಡೆಯಬಹುದು" ಎಂದು ಹೇಳಿದರು.



ದೆಹಲಿ ಉಚ್ಚ ನ್ಯಾಯಾಲಯದ ಆದೇಶದಂತೆ 10-10-1997ರ ಬದಲಿಗೆ 01-01-1996ರಿಂದಲೇ ಸಿಆರ್‌ಪಿಎಫ್ ಸಿಬ್ಬಂದಿಗೆ 5ನೇ ಸಿಪಿಸಿ ಅಡಿಯಲ್ಲಿ ಹಣಕಾಸು ಪ್ರಯೋಜನ ನೀಡಲು ಆದೇಶಿಸಲಾಗಿದೆ. ಆ ಅವಧಿಯಲ್ಲಿ ಸೇವೆಯಲ್ಲಿದ್ದವರು ಅರ್ಜಿ ಸಲ್ಲಿಸಿ ಇದರ ಸೌಲಭ್ಯ ಪಡೆಯಬಹುದು ಎಂದು ತಿಳಿಸಿದರು.

ಸಭೆಯಲ್ಲಿ ಕುಮಾರಸ್ವಾಮಿ ಕೋರಧಾನ್ಯಮಠ, ಬಸವರಾಜ ಕಡೆತೋಟದ, ಉಮೇಶ ಕರಮುಡಿ, ಗುರುಶಾಂತಗೌಡ ಮಲ್ಲನಗೌಡ್ರ, ಚಂದ್ರಶೇಖರಪ್ಪ ಹರ್ತಿ, ಸಿದ್ರಾಮಪ್ಪ ಕಟ್ಟಿಮನಿ, ಸಂಗಪ್ಪ ಕುಷ್ಟಗಿ, ಪ್ರಭುದೇವ ಮುಕ್ಕನಗೌಡ್ರ, ಶಶಿಕಾಂತ ಕರಡಿ, ಮಲ್ಲಿಕಾರ್ಜುನ ಮಲ್ಲನಗೌಡ್ರ, ದಾವಲಸಾಬ ಕಿಲ್ಲೇದಾರ, ಈರಪ್ಪ ದೊಡ್ಡಣ್ಣವರ, ರಾಮಪ್ಪ ರೋಣದ, ಮಲ್ಲಪ್ಪ ಕಡೆತೋಟದ, ರೇವಣಸಿದ್ದಪ್ಪ ನರಗುಂದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

**"ಹಿಂದಿನ ವಿದ್ಯಾರ್ಥಿಗಳೇ ನಮ್ಮ ಸಂಸ್ಥೆಯ ನಿಜವಾದ ಆಸ್ತಿ" ಎಂದ ರವೀಂದ್ರನಾಥ ದೊಡ್ಡಮೇಟಿ**

# ಗುರುಗಳ ಋಣ ತೀರಿಸಿದ ಹಳೆ ವಿದ್ಯಾರ್ಥಿಗಳು!

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶಾಲೆಯಲ್ಲಿ ಕಲಿತು ಇಂದು ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಹಳೆ ವಿದ್ಯಾರ್ಥಿಗಳೇ ಶಿಕ್ಷಣ ಸಂಸ್ಥೆಯ ನಿಜವಾದ ಆಸ್ತಿ ಎಂದು ಎಸ್‌ಎವಿವಿಪಿ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ಶ್ರೀ ಬಸವೇಶ್ವರ ಕನ್ನಡ ಪ್ರಾಥಮಿಕ ಶಾಲೆಯ 2004ನೇ ಬ್ಯಾಚ್ ವಿದ್ಯಾರ್ಥಿಗಳಿಂದ ಆಯೋಜಿಸಿದ್ದ ಗುರುವಂದನಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

"ತಾವು ಕಲಿತ ಶಾಲೆಯನ್ನು ಮರೆಯದೆ ಗುರುಗಳನ್ನು ಗೌರವಿಸುವ ಸಂಸ್ಕೃತಿ ಇಂದಿನ ಪೀಳಿಗೆಗೆ ಮಾದರಿಯಾಗಿದೆ. ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳ ಕನಸಿನ ಕೂಸಾದ ಈ ಶಾಲೆ ಇಂದು ಸಾವಿರಾರು ವಿದ್ಯಾರ್ಥಿಗಳಿಗೆ ಜ್ಞಾನದ ಬೆಳಕು ನೀಡುತ್ತಿರುವುದು ಹೆಮ್ಮೆಯ ಸಂಗತಿ" ಎಂದು ಹೇಳಿದರು.



ಗಜೇಂದ್ರಗಡ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಬಿ. ಕುರಿ ಮಾತನಾಡಿ, "ಅಂದು ಈ ಶಾಲೆಯಲ್ಲಿ ಓದಿದ ವಿದ್ಯಾರ್ಥಿಗಳು ಪ್ರತಿಭಾವಂತರಾಗಿದ್ದರು. ಇಂದು ಅವರು ಸಮಾಜದ ವಿವಿಧ ಹಂತಗಳಲ್ಲಿ ಸೇವೆ ಸಲ್ಲಿಸುತ್ತಿರುವುದು ಶಿಕ್ಷಕರಾಗಿ ಸಂತಸ ತಂದಿದೆ" ಎಂದರು.

> "ಗುರುಗಳನ್ನು ಗೌರವಿಸುವ ಸಂಸ್ಕೃತಿ ಉಳಿದರೆ ಮಾತ್ರ ಸಮಾಜದ ಮೌಲ್ಯಗಳು ಜೀವಂತವಾಗಿರುತ್ತವೆ"
> – ರವೀಂದ್ರನಾಥ ದೊಡ್ಡಮೇಟಿ

ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ ಮಾತನಾಡಿ, "ಕೆಲವೇ ವಿದ್ಯಾರ್ಥಿಗಳಿಂದ ಆರಂಭವಾದ ಶಾಲೆ ಇಂದು 800ಕ್ಕೂ ಅಧಿಕ ವಿದ್ಯಾರ್ಥಿಗಳನ್ನು ಹೊಂದಿ ಬೆಳೆದಿದೆ. ಇದಕ್ಕೆ ಲಿಂ. ಡಾ. ಅಭಿನವ ಅನ್ನದಾನ ಶ್ರೀಗಳ ಆಶೀರ್ವಾದ ಹಾಗೂ ಇಂದಿನ ಪೀಠಾಧಿಪತಿ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳ ಮಾರ್ಗದರ್ಶನ ಕಾರಣ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಳೆ ವಿದ್ಯಾರ್ಥಿಗಳು ತಮ್ಮ ಶಾಲಾ ದಿನಗಳ ಸವಿ ನೆನಪುಗಳನ್ನು ಹಂಚಿಕೊಂಡರು.

ಹರೀಶ ಗ್ರಾಮಪುರೋಹಿತ, ರವಿ ವಡ್ಡಟ್ಟಿ, ಮಂಜುನಾಥ ಕೊಟಗಿ, ಹಂಡಿ, ಯಕ್ಕುಂಡಿ, ಯಮನೂರ, ಹುಲ್ಲೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಅಣ್ಣಪ್ಪ ಮುಂಡೇವಾಡಿ ಕಾರ್ಯಕ್ರಮ ನಿರೂಪಿಸಿದರು. ಐಟಿಐ ಪ್ರಾಚಾರ್ಯ ಬಸವೇಶ ಜೋಳದ ಸ್ವಾಗತಿಸಿದರು. ಪ್ರತೀಕ್ಷಾ ಮುರನಾಳ ವಂದಿಸಿದರು.

---

**ಸರ್ಕಾರದ ವಿರುದ್ಧ ಎಸ್‌ಡಿಪಿಐ ಆಕ್ರೋಶ ; ಟಾಂಗಾಕೂಟದಲ್ಲಿ ಪ್ರತಿಭಟನೆ**

# ಕೋಮು ಗೂಂಡಾಗಳ ಕೇಸ್ ವಾಪಸ್ ನಿರ್ಧಾರ ರದ್ದುಪಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಂಘ ಪರಿವಾರದ ಮುಖಂಡರ ಮೇಲಿನ ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯಲು ರಾಜ್ಯ ಸರ್ಕಾರ ತೆಗೆದುಕೊಂಡಿರುವ ನಿರ್ಧಾರವನ್ನು ತಕ್ಷಣ ರದ್ದುಪಡಿಸಬೇಕು ಎಂದು ಆಗ್ರಹಿಸಿ ಎಸ್‌ಡಿಪಿಐ ಕಾರ್ಯಕರ್ತರು ಭಾನುವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಹುಯಿಲಗೋಳ ನಾರಾಯಣ ವೃತ್ತ (ಟಾಂಗಾಕೂಟ)ದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಎಸ್‌ಡಿಪಿಐ ಗದಗ ಜಿಲ್ಲಾ ಅಧ್ಯಕ್ಷ ಬಿಲಾಲ್ ಗೋಕಾವಿ, "ಪ್ರಮೋದ್ ಮುತಾಲಿಕ್, ಚೈತ್ರಾ ಕುಂದಾಪುರ, ಆಂದೋಲ ಸ್ವಾಮಿ ಸೇರಿದಂತೆ ಕೋಮು ದ್ವೇಷ ಭಾಷಣ ಹಾಗೂ ಗಲಭೆ ಪ್ರಕರಣಗಳಲ್ಲಿ ಆರೋಪ ಎದುರಿಸುತ್ತಿರುವವರ ಮೇಲಿನ ಪ್ರಕರಣಗಳನ್ನು ಹಿಂಪಡೆಯುವ ಮೂಲಕ




ಸರ್ಕಾರ ಕಾನೂನು ಸುವ್ಯವಸ್ಥೆಯ ಮೂಲ ತತ್ವಗಳ ಮೇಲೆಯೇ ದಾಳಿ ನಡೆಸಿದೆ" ಎಂದು ಆರೋಪಿಸಿದರು.

ಸಮಾಜದಲ್ಲಿ ದ್ವೇಷ ಮತ್ತು ವಿಭಜನೆಗೆ ಕಾರಣವಾಗಿರುವವರ ವಿರುದ್ಧ ದಾಖಲಾಗಿದ್ದ ಪ್ರಕರಣಗಳನ್ನು ವಾಪಸ್ ಪಡೆಯುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಕಾನೂನು ಎಲ್ಲರಿಗೂ ಸಮಾನವಾಗಿರಬೇಕು. ಸಮಾಜಘಾತುಕ ಶಕ್ತಿಗಳಿಗೆ ಸರ್ಕಾರ ವಿಶೇಷ ರಿಯಾಯಿತಿ ನೀಡುತ್ತಿರುವುದು ಪ್ರಶ್ನಾರ್ಹ ಎಂದು ಅವರು ಹೇಳಿದರು.

ಅಮಾಯಕರು, ಕನ್ನಡಪರ ಹೋರಾಟಗಾರರು ಹಾಗೂ ರೈತರ ಮೇಲಿನ ಪ್ರಕರಣಗಳನ್ನು ಹಿಂಪಡೆಯುವುದನ್ನು ನಾವು ಸ್ವಾಗತಿಸುತ್ತೇವೆ. ಆದರೆ ನಿರಂತರವಾಗಿ ಕೋಮು ಪ್ರಚೋದನೆ ಮಾಡುವವರ ವಿರುದ್ಧದ ಪ್ರಕರಣಗಳನ್ನು ವಾಪಸ್ ಪಡೆಯುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದು ಹೇಳಿದರು.

ಎಸ್‌ಡಿಪಿಐ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಫ್ಘಾನ್ ತರಫ್ದಾರ್ ಮಾತನಾಡಿ, "ಮುಸ್ಲಿಮರು, ದಲಿತರು ಹಾಗೂ ಹಿಂದುಳಿದ ವರ್ಗಗಳ ವಿರುದ್ಧ ದಾಖಲಾಗಿರುವ ಅನೇಕ ಪ್ರಕರಣಗಳಲ್ಲಿ ಸರ್ಕಾರ ಕಾನೂನು ಅಡಚಣೆ ನೆಪ ಹೇಳುತ್ತಿದೆ. ಆದರೆ ದ್ವೇಷ ಭಾಷಣ ಮಾಡುವವರ ಪ್ರಕರಣ ಹಿಂಪಡೆಯುವಾಗ ಯಾವುದೇ ಅಡ್ಡಿ ಕಾಣಿಸುತ್ತಿಲ್ಲ" ಎಂದು ಟೀಕಿಸಿದರು.

ಕೆ.ಜಿ.ಹಳ್ಳಿ, ಡಿ.ಜೆ.ಹಳ್ಳಿ ಹಾಗೂ ಹುಬ್ಬಳ್ಳಿ ಪ್ರಕರಣಗಳಲ್ಲಿ ಅನೇಕ ಅಮಾಯಕ ಯುವಕರು ವರ್ಷಗಳಿಂದ ಜೈಲು ಶಿಕ್ಷೆ ಅನುಭವಿಸುತ್ತಿದ್ದಾರೆ. ಅವರ ಕುಟುಂಬಗಳ ನೋವು ಸರ್ಕಾರಕ್ಕೆ ಕಾಣಿಸುತ್ತಿಲ್ಲವೇ ಎಂದು ಪ್ರಶ್ನಿಸಿದರು.

ಪ್ರತಿಭಟನೆಯಲ್ಲಿ ಪಕ್ಷದ ಹಿರಿಯ ಮುಖಂಡ ಹಿದಾಯತುಲ್ಲಾ ಕಾಗದಗಾರ, ವಿಮೆನ್ ಇಂಡಿಯಾ ಮೂವ್ಮೆಂಟ್ ಪದಾಧಿಕಾರಿಗಳು, ಗದಗ ವಿಧಾನಸಭಾ ಕ್ಷೇತ್ರ ಸಮಿತಿ ಅಧ್ಯಕ್ಷ ಮುಸ್ತಾಕ್ ಹೊಸಮನಿ, ಕಾರ್ಯದರ್ಶಿ ಸಮೀರ್ ಕೊಟ್ಟೂರ್, ಇಬ್ರಾಹಿಂ ಕುಂದರಪಿ, ಫಯಾಜ್ ಚಿನ್ನೂರ್, ರಶೀದ್ ಕಟ್ಟಿಮನಿ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿ ಆಕ್ರೋಶ ವ್ಯಕ್ತಪಡಿಸಿದರು.

---

# ಸಂತ್ರಸ್ತರ ಅಳಲು ಆಲಿಸಿದ ಸಚಿವ ಪಾಟೀಲ

▶▶ಮೊದಲನೇ ಪುಟದಿಂದ

ಪ್ರಸ್ತುತ ಸಂತ್ರಸ್ತರು ಶಾಲಾ ಕೊಠಡಿಗಳಲ್ಲಿ ಆಶ್ರಯ ಪಡೆದಿದ್ದು, ಶಾಲೆಗಳು ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗದಂತೆ ಪರ್ಯಾಯ ವ್ಯವಸ್ಥೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಜಿಲ್ಲಾಧಿಕಾರಿಗಳು ಈಗಾಗಲೇ ಆಹಾರ, ಆರೋಗ್ಯ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿದ್ದಾರೆ. 96 ಕುಟುಂಬಗಳಲ್ಲಿ ಯಾರಿಗೆ ಮನೆ ಇದೆ, ಯಾರಿಗೆ ಇಲ್ಲ ಎಂಬುದರ ಸಮಗ್ರ ಪರಿಶೀಲನೆ ನಡೆಸಿ, ನಗರಸಭೆ ನಿಯಮಾವಳಿಗಳ ಅನ್ವಯ ಅರ್ಹರಿಗೆ ಮನೆ ಮಂಜೂರು ಮಾಡುವ ಪ್ರಕ್ರಿಯೆ ಕೈಗೊಳ್ಳಲಾಗುವುದು ಎಂದರು.

ಈ ಸಂದರ್ಭದಲ್ಲಿ ಸಾರ್ವಜನಿಕರು, ಸಚಿವರ ಮುಂದೆ ಮಂಜೂರಾದ ಮನೆಗಳ ಮರುಸರ್ವೇ ನಡೆಸಬೇಕು, ಮನೆ ಪಡೆದು ಬಾಡಿಗೆಗೆ ನೀಡಿರುವವರ ವಿರುದ್ಧ ಕ್ರಮ ಕೈಗೊಳ್ಳಬೇಕು, ಶಾಶ್ವತ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಬೇಕು, ಸೋಲಾರ್ ಲೈಟ್ ಅಳವಡಿಸಬೇಕು, ಮೂಲಭೂತ ಸೌಲಭ್ಯ ಒದಗಿಸಬೇಕು,

ಮನೆ ಸಿಗುವವರೆಗೆ ಇಲ್ಲಿಯೇ ವಾಸಿಸಲು ಅವಕಾಶ ನೀಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ತಾಲ್ಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ಕೆಡಿಪಿ ಸಮಿತಿ ಸದಸ್ಯ ಎಸ್.ಎನ್. ಬಳ್ಳಾರಿ, ನೀಲವ್ವ ಬೋಳನವರ, ಸಿದ್ದು ಪಾಟೀಲ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ತಹಸೀಲ್ದಾರ್ ಶ್ರೀನಿವಾಸಮೂರ್ತಿ, ಡಾ. ಎಸ್.ಎಸ್. ನೀಲಗುಂದ, ಆರ್.ಎಸ್. ಬುರಡಿ ಸೇರಿದಂತೆ ವಿವಿಧ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka